# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ

EDITOR: MAHESHWARI BHIMASHI BHARAMANNAVARA

BELAGAVI VARTE

KANNADA DAILY MORNING BELAGAVI

G-mail: belagavivarte1@gmail.com

epaper. belagavivarte.com

Regd No : G2/PMG/KA/NK/BM/157/26-28

Volume: 01 Issue : 96 THURSDAY 18-06-2026 PRGI No : KNKAN/26/A0962 Pages:4 Rs.2.00 M: 9742418836


## ‘ಚಿನ್ನಯ್ಯ ಹೇಳಿಕೆಗೆ ನನಗೂ ಸಂಬಂಧವಿಲ್ಲ, ತನಿಖೆಯಾಗಲಿ



ಬೆಂಗಳೂರು: ಧರ್ಮಸ್ಥಳ ಪ್ರಕರಣಕ್ಕೆ ಸಂಬಂಧಿಸಿದಂತೆ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿರುವ ಆರೋಪಗಳು ಹಾಗೂ ‘ಚಿನ್ನಯ್ಯ’ ಎಂಬಾತ ನೀಡಿರುವ ಹೇಳಿಕೆಗಳಿಗೂ ತನಗೂ ಯಾವುದೇ ಸಂಬಂಧವಿಲ್ಲ ಎಂದು ಬಹುಭಾಷಾ ನಟ ಪ್ರಕಾಶ್ ರಾಜ್ ಸ್ಪಷ್ಟಪಡಿಸಿದ್ದಾರೆ.

ನಗರದ ಪ್ರೆಸ್ ಕ್ಲಬ್‌ನಲ್ಲಿ ತುರ್ತು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಪ್ರಕರಣದಲ್ಲಿ ಅನಾವಶ್ಯಕವಾಗಿ ತಮ್ಮ ಹೆಸರನ್ನು ಎಳೆದು ತರಲಾಗುತ್ತಿದೆ ಎಂದು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

“ಕೇರಳದಿಂದ ಧರ್ಮಸ್ಥಳದ ಹೆಸರು ಹಾಳು ಮಾಡಲು 200 ಕೋಟಿ ರೂಪಾಯಿ ಬಂದಿದೆ ಎಂದು ಚಿನ್ನಯ್ಯ ಎಂಬಾತ ಹೇಳಿಕೊಂಡಿದ್ದಾನೆ. ಅದರಲ್ಲಿ ನನ್ನ ಹೆಸರನ್ನೂ ಬಳಸಿದ್ದಾನೆ. ಆದರೆ ನಾನು ಧರ್ಮಸ್ಥಳಕ್ಕೆ ಎಂದೂ ಹೋದವನಲ್ಲ, ಅಲ್ಲಿ ಯಾರನ್ನೂ ಭೇಟಿ ಮಾಡಿದವನಲ್ಲ” ಎಂದು ಪ್ರಕಾಶ್ ರಾಜ್ ತಿಳಿಸಿದರು.

ಈ ಹಿಂದೆ ಗಿರೀಶ್ ಮಟ್ಟಣ್ಣನವರ್ ಅವರು ನನಗೆ ಕರೆ ಮಾಡಿ, ‘ಮಾಸ್ಕ್ ಮ್ಯಾನ್’ ಒಬ್ಬರು ನಿಮ್ಮೊಂದಿಗೆ ಮಾತನಾಡಬೇಕು ಎನ್ನುತ್ತಿದ್ದಾರೆ ಎಂದಿದ್ದರು. ಆ ವ್ಯಕ್ತಿ ಮಂಡ್ಯದವನು ಎಂದು ಹೇಳಲಾಯಿತಾದರೂ, ನನ್ನೊಂದಿಗೆ ತಮಿಳಿನಲ್ಲಿ ಮಾತನಾಡಿದ. ಆತ ನನ್ನನ್ನು ಭೇಟಿ ಮಾಡಲು ಬಯಸಿದಾಗ ನಾನು ನಿರಾಕರಿಸಿ, ಧ್ವನಿ ಸಂದೇಶ ಕಳುಹಿಸಲು ಹೇಳಿದೆ. ಆ ಆಡಿಯೋ ಬಂದ ತಕ್ಷಣ ನಾನು ಅದನ್ನು ಎಸ್‌ಐಟಿ ಅಧಿಕಾರಿ ಮೊಹಾಂತಿ ಅವರಿಗೆ ಹಸ್ತಾಂತರಿಸಿದ್ದೆ. ಚಿನ್ನಯ್ಯ ಇಡೀ ಕರ್ನಾಟಕದ ಜನತೆಗೆ ಚಳ್ಳೆಹಣ್ಣು ತಿನ್ನಿಸುತ್ತಿದ್ದಾನೆ” ಎಂದು ನಟ ಆರೋಪಿಸಿದರು.

ಧರ್ಮಸ್ಥಳ ಪ್ರಕರಣದ ಬಗ್ಗೆ ನಿಷ್ಪಕ್ಷಪಾತ ತನಿಖೆಯಾಗಬೇಕು ಎಂದು ತಾವೇ ಖುದ್ದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದು ಎಸ್‌ಐಟಿ ರಚನೆಗೆ ಒತ್ತಾಯಿಸಿದ್ದಾಗಿ ಪ್ರಕಾಶ್ ರಾಜ್ ನೆನಪಿಸಿಕೊಂಡರು. ಸರ್ಕಾರ ಕೂಡ ಒಬ್ಬ ದಕ್ಷ ಅಧಿಕಾರಿಯನ್ನು ನೇಮಕ ಮಾಡಿದೆ. ತನಿಖೆಗೆ ಕರೆಯ ಬಂದಾಗ ಆ ವ್ಯಕ್ತಿ (ಮಾಸ್ಕ್ ಮ್ಯಾನ್) ತನಗೆ ಧೈರ್ಯವಿಲ್ಲ ಎಂದು ಹಿಂದೆ ಸರಿದಿದ್ದ ಎಂದು ಅವರು ವಿವರಿಸಿದರು.

## ರಿಯಲ್ ಎಸ್ಟೇಟ್ ಗೆ ಕೈ ಸರ್ಕಾರ ಆದ್ಯತೆ


ಬೆಂಗಳೂರು: ರಾಜ್ಯದಲ್ಲಿ ಅಧಿಕಾರದಲ್ಲಿರುವ ಕಾಂಗ್ರೆಸ್ ಸರ್ಕಾರದ ಪ್ರಮುಖ ಆದ್ಯತೆ ರಿಯಲ್ ಎಸ್ಟೇಟ್ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಹಾಗೂ ಶಾಸಕ ಬಿ.ವೈ. ವಿಜಯೇಂದ್ರ ಅವರು ಆರೋಪಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಡಿ.ಕೆ. ಶಿವಕುಮಾರ್ ಅವರು ಅಧಿಕಾರ ಸ್ವೀಕರಿಸಿದ ಕೆಲವೇ ಗಂಟೆಗಳಲ್ಲಿ ತಮ್ಮ ಸರ್ಕಾರದ ಆದ್ಯತೆ ರಿಯಲ್ ಎಸ್ಟೇಟ್ ಎಂಬುದನ್ನು ತೋರಿಸಿದ್ದಾರೆ. ಈ ಸರ್ಕಾರಕ್ಕೆ ರೈತರ ಮೇಲೆ ಕಾಳಜಿಯಿಲ್ಲ. ಬಿಡದಿಯಲ್ಲಿ ಟೌನ್‌ಶಿಪ್ ಮಾಡಲು ಮುಂದಾಗಿರುವ ಸರ್ಕಾರ ಬಲಾತ್ಕಾರವಾಗಿ ಅಕ್ರಮವಾಗಿ ರೈತರ ಜಮೀನು ಕಸಿಯಲು ಮುಂದಾಗಿದೆ. ಇದನ್ನು ಬಿಜೆಪಿ ವಿರೋಧಿಸಲಿದೆ. ಆದ್ದರಿಂದ ಇಂತಹ ಕೆಲಸವನ್ನು ಸರ್ಕಾರ ಕೈಬಿಡಬೇಕು ಎಂದು ಒತ್ತಾಯಿಸಿದರು.

ಅನ್ನದಾತರಿಗೆ ಈ ಸರ್ಕಾರ ನೆರವಾಗಬೇಕಿತ್ತು. ಆದರೆ ದುರದೃಷ್ಟವೆಂದರೆ ಬೆಂಗಳೂರಿನ ರಿಯಲ್ ಎಸ್ಟೇಟ್ ಸರ್ಕಾರಕ್ಕೆ ಮುಖ್ಯವಾಗಿದೆ. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಭಂಡತನ ಬಿಟ್ಟು ರೈತರ ಸಮಸ್ಯೆಗಳನ್ನು ಆಲಿಸಬೇಕು. ಅವರನ್ನು ಒಕ್ಕಲೆಬ್ಬಿಸಬಾರದು. ಟೌನ್‌ಶಿಪ್ ಗಾಗಿ ಭೂಸ್ವಾಧೀನವನ್ನು ನಿಲ್ಲಿಸಬೇಕು ಎಂದರು.

**ಗ್ಯಾರಂಟಿ ಅನುಷ್ಠಾನ ಸಮಿತಿ ಕತ್ತೆ ಕಾಯುತ್ತಿದೆಯೇ**

ಗ್ಯಾರಂಟಿಗಳಲ್ಲಿ ಅಕ್ರಮ ಆಗೋವರೆಗೆ ಅನುಷ್ಠಾನ ಸಮಿತಿಗಳು ಕತ್ತೆ



ಕಾಯುತ್ತಿದ್ದವೇ. ಒಂದೂವರೆ ಲಕ್ಷಕ್ಕೂ ಹೆಚ್ಚು ಜನರು ಆದಾಯ ತೆರಿಗೆ ಪಾವತಿ ಮಾಡುವವರು ಗೃಹ ಲಕ್ಷ್ಮಿ ಪಡೆಯುತ್ತಿದ್ದಾರೆ ಎಂದು ಅನುಷ್ಠಾನ ಸಮಿತಿ ಹೇಳಿದೆ. ಗ್ಯಾರಂಟಿ ಜಾರಿ ಮಾಡುವಾಗ ಕಾಕಾ ಪಾಟೀಲ್, ಮಹಾದೇವಪ್ಪಗೆ ಫ್ರೀ ಎಂದಿದ್ದರು. ಈಗ ಹೇಗೆ ಅವರೆಲ್ಲ ತೆರಿಗೆ ಪಾವತಿದಾರರಾಗುತ್ತಾರೆ ಎಂದು ಕೇಳಿದರು.

ಗ್ಯಾರಂಟಿ ಅನುಷ್ಠಾನ ಸಮಿತಿ ಉಪಾಧ್ಯಕ್ಷರಿಗೆ ಸಚಿವ ಸಂಪುಟ ದರ್ಜೆ ನೀಡಲಾಗಿದೆ. ಜಿಲ್ಲೆಯಲ್ಲಿ ಅಧ್ಯಕ್ಷರಿದ್ದಾರೆ. ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಅನುಷ್ಠಾನ ಸಮಿತಿ ಇದೆ. ಇವರೆಲ್ಲ ಕತ್ತೆ ಕಾಯುತ್ತಿದ್ದಾರೆಯೇ ಎಂದು ವ್ಯಂಗ್ಯವಾಡಿದರು.

ಗ್ಯಾರಂಟಿಗಳಿಂದ ಸರ್ಕಾರಕ್ಕೆ ಈಗ ಹೊರೆ ಆಗ್ತಾ ಇದೆ. ಸಮಿತಿಗಳಿಗೆ, ಅಧ್ಯಕ್ಷರಿಗೆ ಕಚೇರಿ, ವೇತನ, ಇತರ ಸೌಲಭ್ಯಗಳಿಗೆ ನೂರಾರು ಕೋಟಿ ವ್ಯಯಿಸಲಾಗುತ್ತಿದೆ. ಇದು ಸರ್ಕಾರದ ವೈಫಲ್ಯ. ಗ್ಯಾರಂಟಿಗಳಿಗೆ ಹಣ ಹೊಂದಿಸಲು ಸಾಧ್ಯವಾಗದೇ ಒಂದೊಂದೆ ನೆಪ ಹೇಳಿಕೊಂಡು ಈಗ ಸೌಲಭ್ಯಗಳಿಗೆ ಕತ್ತರಿ ಹಾಕ್ತ ಇದ್ದಾರೆ. ಇದಕ್ಕೆ ರಾಜ್ಯದ ಜನ ಛೀಮಾರಿ ಹಾಕ್ತ ಇದ್ದಾರೆ ಎಂದರು.

ರಾಜ್ಯ ಸರ್ಕಾರವೇ ಎಸ್‌ಐಆರ್ ವಿಚಾರದಲ್ಲಿ ದ್ವಂದ್ವ ನಿಲುವು ತೋರಿಸುತ್ತಿದೆ. ಅಧಿಕಾರಿಗಳನ್ನು ಎತ್ತಿಕಟ್ಟುವ ಕೆಲಸ ಮಾಡಲಾಗುತ್ತಿದೆ. ಬಿಎಲ್‌ಒಗಳಿಗೆ ರಾಜ್ಯ ಸರ್ಕಾರ ಕುಮ್ಮಕ್ಕು ನೀಡುತ್ತಿದೆ ಎಂದು ದೂರಿದರು.

ಕಾಂಗ್ರೆಸ್‌ನ ಮಹಾನ್ ನಾಯಕ ರಾಹುಲ್ ಗಾಂಧಿ ಅವರು ಬೇರೆ ದೇಶ ನೈಜ ಪೌರತ್ವ ಪಡೆದಿದ್ದಾರೆ. ಇನ್ನೊಂದು ದೇಶದ ಪೌರತ್ವ ಇಟ್ಟುಕೊಂಡು ಅಕ್ರಮವಾಗಿ ಸುಳ್ಳು ಮಾಹಿತಿ ನೀಡಿದ್ದಾರೆ. ಇದರ ಬಗ್ಗೆ ಡಿ.ಕೆ. ಶಿವಕುಮಾರ್ ಹಾಗೂ ಪ್ರಿಯಾಂಕ್ ಖರ್ಗೆ ಅವರು ಬೆಳಕು ಚೆಲ್ಲುವ ಕೆಲಸವನ್ನು ಮಾಡಲಿ ಎಂದರು.

ಚುನಾವಣಾ ಆಯೋಗ ಅಕ್ರಮ ವಲಸಿಗರ ಪತ್ತೆಗೆ, ಮತಪಟ್ಟಿಯಲ್ಲಿ ಎರಡು ಕಡೆ ಹೆಸರು ಇದ್ದರೆ, ಮೃತಪಟ್ಟವರ ಹೆಸರು ಸೇರಿದ್ದರೆ ಸರಿಪಡಿಸಲು ಎಸ್‌ಐಆರ್ ಮಾಡುತ್ತಾ ಇದೆ. ಸಾಂವಿಧಾನಿಕ ಸಂಸ್ಥೆ ವಿರುದ್ಧ ಅಧಿಕಾರಿಗಳನ್ನು, ಜನರನ್ನು ಎತ್ತಿಕಟ್ಟುವ ಕೆಲಸವನ್ನು ಕಾಂಗ್ರೆಸ್ ಮಾಡುತ್ತಿದೆ. ಇದು ಅಕ್ಷಮ್ಯ ಅಪರಾಧ ಎಂದರು.

ರಾಜ್ಯ ಸರ್ಕಾರ ಸುಧಾರಣೆಗಳನ್ನು ಮಾಡಲಿ. ಗ್ಯಾರಂಟಿಗಳಿಗೆ ಹಣ ಹೊಂದಿಸಲು ಫಲಾನುಭವಿಗಳಿಗೆ ಕತ್ತರಿ ಹಾಕುತ್ತಿದ್ದೇವೆ ಎಂಬ ಸತ್ಯವನ್ನು ಜನರ ಮುಂದೆ ಮುಚ್ಚಿಡಲಿ. ಈ ಸರ್ಕಾರದ ಯೋಗ್ಯತೆಗೆ ಮೂರು ವರ್ಷದಲ್ಲಿ ಜನರಿಗೆ ಮನೆ ನೀಡಲಿಲ್ಲ. ರೈತರ ಸಂಕಷ್ಟಕ್ಕೆ ಸ್ಪಂದಿಸಲಿಲ್ಲ, ಗಂಗಾ ಕಲ್ಯಾಣ ಅಕ್ರಮ ತನಿಖೆ ಮಾಡಲಿಲ್ಲ. ಹೈನುಗಾರಿಕೆಗೆ ಪ್ರೋತ್ಸಾಹ ಧನ ನೀಡಲಿಲ್ಲ ಎಂದು ಹೇಳಿದರು.

ಆರೆಸ್‌ಎಸ್ ಬಗ್ಗೆ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರು ಒಂದಲ್ಲ ಒಂದು ಹೇಳಿಕೆ ಪ್ರತಿದಿನ ನೀಡುತ್ತಾ ಇದ್ದಾರೆ. ಅವರ ಬಾಯಿ ಚಪಲಕ್ಕೆ ಉತ್ತರ ಕೊಡಲ್ಲ. ಅವರು ರಾಜ್ಯದ ಗೃಹ ಸಚಿವರು. ಅವರು ಮಾಡಬೇಕಾದ ಕೆಲಸ ತುಂಬಾ ಇವೆ. ಅಕ್ರಮ ನುಸುಳುಕೋರರು, ಲವ್ ಜಿಹಾದ್, ಹಿಂದೂ ಕಾರ್ಯಕರ್ತರ ಹತ್ಯೆ ಬಗ್ಗೆ ಗಮನ ಹರಿಸಲಿ. ಅದನ್ನು ಬಿಟ್ಟು ಬೇರೆ ಮಾತನಾಡುತ್ತಾರೆ ಎಂದರು.

## ಆರ್ ಬಿ ತಿಮ್ಮಾಪುರ ಅವರಿಗೆ ಮಂತ್ರಿ ಸ್ಥಾನ ನೀಡಲು ಆಗ್ರಹ



**ಬೆಳಗಾವಿ ವಾರ್ತೆ ಮೋಳೆ :** ಉತ್ತರ ಕರ್ನಾಟಕದ ಪ್ರಭಾವಿ ಹಿರಿಯ ರಾಜಕಾರಣಿ, ದಲಿತ ಸಮುದಾಯದ ನಾಯಕ ಆರ್ ಬಿ ತಿಮ್ಮಾಪುರ ಅವರಿಗೆ ಸಚಿವ ಸ್ಥಾನ ನೀಡಬೇಕು ಎಂದು ಕೆಪಿಸಿಸಿ ಪರಿಶಿಷ್ಟ ಜಾತಿ ರಾಜ್ಯ ಮಾಧ್ಯಮ ವಕ್ತಾರ ರಾವಸಾಬ ಐಹೊಳೆ ಹಾಗೂ ತಾಲೂಕ ಮಾದಿಗ ಮೀಸಲಾತಿ ಹೋರಾಟ ಸಮಿತಿಯ ಮುಖಂಡರು ಸಿಎಂ ಡಿ. ಕೆ ಶಿವಕುಮಾರ ಹಾಗೂ ಪಕ್ಷದ ವರಿಷ್ಠರಿಗೆ ಒತ್ತಾಯ ಮಾಡಿದ್ದಾರೆ.

ಅವರು ಪತ್ರಿಕಾಗೋಷ್ಠಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ ಆರ್ ಬಿ ತಿಮ್ಮಾಪುರ ಅವರು ಉತ್ತರ ಕರ್ನಾಟಕದ ಹಿರಿಯ ಶಾಸಕರಾಗಿ ಅನೇಕ ಬಾರಿ ಸಚಿವರಾಗಿ ಸೇವೆ ಸಲ್ಲಿಸಿದ ಅನುಭವ ಹೊಂದಿದ್ದಾರೆ. ಇದಲ್ಲದೆ ಇತ್ತೀಚಿಗೆ ಬಾಗಲಕೋಟೆಯ ಉಪಚುನಾವಣೆಯಲ್ಲಿ ಉಮೇಶ್ ಮೇಟಿ ಅವರ ಗೆಲುವಿನಲ್ಲಿ ಪ್ರಮುಖ ಪಾತ್ರ ವಹಿಸಿದ್ದರು. ತಿಮ್ಮಾಪುರ ಅವರು ತಮ್ಮ ರಾಜಕೀಯ ಬದುಕಿನುದ್ದಕ್ಕೂ ಕಾಂಗ್ರೆಸ್‌ನ ತತ್ವ ಸಿದ್ಧಾಂತಗಳನ್ನು ಅನುಸರಿಸಿಕೊಂಡು ಬಂದಿದ್ದಾರೆ. ಪಕ್ಷ ಸಂಘಟನೆಗೆ ನಿರಂತರ ಶ್ರಮಿಸಿದ್ದಾರೆ. ಪಕ್ಷ ಇವರ ಶ್ರಮವನ್ನು ಪರಿಗಣಿಸಿ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರ ನೇತೃತ್ವದ ಸರ್ಕಾರದಲ್ಲಿ ಪ್ರಮುಖ ಖಾತೆಯ ಸಚಿವ ಸ್ಥಾನ ನೀಡಬೇಕು ಎಂದು ಆಗ್ರಹಿಸಿದ್ದಾರೆ.

ಬೆಳಗಾವಿ ಜಿಲ್ಲಾ ಮಧ್ಯವರ್ತಿ ಸಹಕಾರಿ ಬ್ಯಾಂಕಿನ ನಿರ್ದೇಶಕಿ ಹಾಗೂ ಎಐಸಿಸಿ ಸಂಯೋಜಕಿ ಸುನಿತಾ ಐಹೊಳೆ ಮಾತನಾಡಿ ಉತ್ತರ ಕರ್ನಾಟಕದ ದಲಿತ ಸಮುದಾಯದ ಹಿರಿಯ ನಾಯಕರಾಗಿರುವ ಆರ್ ಬಿ ತಿಮ್ಮಾಪುರ ನಾಲ್ಕೈದು ಬಾರಿ ಸಚಿವರಾಗಿ ರಾಜ್ಯದಲ್ಲಿ ಅನೇಕ ಅಭಿವೃದ್ಧಿ ಕೊಡುಗೆಗಳನ್ನು ನೀಡಿದ್ದಾರೆ. ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಹಾಗೂ ರಾಜ್ಯ ಮತ್ತು ಕೇಂದ್ರ ವರಿಷ್ಠರು ಆರ್ ಬಿ ತಿಮ್ಮಪೂರ್ ಅವರಿಗೆ ಮಂತ್ರಿ ಸ್ಥಾನವನ್ನು ನೀಡಬೇಕೆಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಅಥಣಿ ತಾಲೂಕ ಮಾದಿಗ ಮೀಸಲಾತಿ ಹೋರಾಟ ಸಮಿತಿಯ ಅಧ್ಯಕ್ಷ ಹನುಮಂತ ಅರ್ದಾಯೂರ, ಸಮಾಜದ ಮುಖಂಡರಾದ ಕುಮಾರ ಗಸ್ತಿ, ಸಂತೋಷ್ ಹಾದಿಮನಿ, ಸದಾಶಿವ ದೊಡ್ಡಮನಿ, ಸುದೀಪ್ ಐಹೊಳೆ, ಸತೀಶ್ ಕುಲ್ಲೊಳ್ಳಿ, ಪ್ರಶಾಂತ್ ಆಚಾರಟ್ಟಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

***************

## ಯಲ್ಲಮ್ಮನ ಗುಡ್ಡಕ್ಕೆ ಭೇಟಿ ನೀಡಿ ಶ್ರೀದೇವಿಯ ದರ್ಶನ ಆಶೀರ್ವಾದ



ಅಭಿವೃದ್ಧಿ ಪ್ರಾಧಿಕಾರದ ಸದಸ್ಯ ಶಿದ್ದನಗೌಡ ಗೂಡರಾಶಿ ಶಿರಹಟ್ಟಿಯ ಭಾವೈಕ್ಯಪೀಠದ ಫಕೀರೇಶ್ವರ ಸಂಸ್ಥಾನ ಮಠದ ಜಗದ್ಗುರು ಫಕೀರ ಸಿದ್ದರಾಮ ಮಹಾಸ್ವಾಮಿಗಳನ್ನು ಶಾಲೂ ಹೊದಿಸಿ ಸತ್ಕರಿಸಿದರು.

**ಬೆಳಗಾವಿ ವಾರ್ತೆ ಉಗರಗೋಳ:** ಶ್ರೀಕ್ಷೇತ್ರ ರೇಣುಕಾ ಯಲ್ಲಮ್ಮನ ಗುಡ್ಡಕ್ಕೆ ಶಿರಹಟ್ಟಿಯ ಫಕೀರೇಶ್ವರ ಸಂಸ್ಥಾನ ಮಠದ ಜಗದ್ಗುರು ಫಕೀರ ಸಿದ್ದರಾಮ ಮಹಾಸ್ವಾಮಿಗಳು ಭೇಟಿ ನೀಡಿ ಶ್ರೀದೇವಿಯ ದರ್ಶನ ಆಶೀರ್ವಾದ ಪಡೆದುಕೊಂಡರು.

ಯಲ್ಲಮ್ಮ ದೇವಸ್ಥಾನ ಅಭಿವೃದ್ಧಿ ಪ್ರಾಧಿಕಾರದ ಸದಸ್ಯ ಶಿದ್ದನಗೌಡ ಗೂಡರಾಶಿ. ಶಿರಹಟ್ಟಿಯ ಜಗದ್ಗುರು ಫಕೀರ ಸಿದ್ದರಾಮ ಮಹಾಸ್ವಾಮಿಗಳನ್ನು ಶಾಲೂ ಹೊದಿಸಿ ಸತ್ಕರಿಸಿದರು.

ದೇವಸ್ಥಾನ ಅಭಿವೃದ್ಧಿ ಪ್ರಾಧಿಕಾರದ ಸದಸ್ಯ ಶಿದ್ದನಗೌಡ ಗೂಡರಾಶಿ. ಆರ್ ಎಸ್ ಸವದತ್ತಿ ಎಸ್ ಆರ್ ಈಟಿ, ಗೋವಿಂದರಾವ್ ಕುಲಕರ್ಣಿ, ಬಸನಗೌಡ ಪರಸರುಷಿ, ಪರಸನಗೌಡ ರೇಣ್ಕೀಗೌಡ್ರ ಹಾಗೂ ದೇವಸ್ಥಾನ ಸಿಬ್ಬಂದಿ ಇದ್ದರು.

## ಜ್ಯೋತಿ ಅರ್ಬನ್ ಕ್ರೆಡಿಟ್ ಸೊಸೈಟಿಯಿಂದ 100 ಸಸಿ ನೆಡುವುದಲ್ಲದೆ ಅವುಗಳ ಸಂರಕ್ಷನೆಗಾಗಿ 100 ಸಸಿಗಳಿಗೆ ರಕ್ಷಣಾ ತಂತಿ ಬೆಲಿ ಅಳವಡಿಸಿರುವ ಕಾರ್ಯ ಶ್ಲಾಘನೆ

**ಬೆಳಗಾವಿ ವಾರ್ತೆ ಮೂಡಲಗಿ:** ಜ್ಯೋತಿ ಅರ್ಬನ್ ಕ್ರೆಡಿಟ್ ಸೊಸೈಟಿಯಿಂದ 100 ಸಸಿ ನೆಡು ವುದಲ್ಲದೆ ಅವುಗಳ ಸಂರಕ್ಷನೆಗಾಗಿ 100 ಸಸಿಗಳಿಗೆ ರಕ್ಷಣಾ ತಂತಿ ಬೆಲಿ ಅಳವಡಿ ಸಿರುವ ಕಾರ್ಯವನ್ನು ಮೂಡಲಗಿ ತಹಸೀಲ್ದಾರ್ ಶ್ರೀಶೈಲ್ ಗುಡಮೆ ಅವರು ಶ್ಲಾಘನಿಸಿದರು. ಅವರು ಪಟ್ಟಣದ ಜ್ಯೋತಿ ಅರ್ಬನ್ ಕ್ರೆಡಿಟ್ ಸೊಸಾಯಿಟಿ ಯಿಂದ ಪರಿಸರ ದಿನಾಚರಣೆ ನಿಮಿತ್ಯ ಹಮ್ಮಿಕೊಂಡಿರುವ ಸಸಿಗಳನ್ನು ನೆಡವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾ ಡಿ, ಪ್ರತಿಯೊಬ್ಬರು ಸಸಿ ನೆಟ್ಟು ಅವುಗಳು ತಮ್ಮಷ್ಟಕ್ಕೆ ತಾವೇ ಬೆಳೆಯುವಂತೆ ಆಗುವರಿ ಗೂ ಪಾಲನೆ ಪೋಷಣೆ ಮಾಡಿದರೆ ಮಾತ್ರ ಸಸಿ ನೆಟ್ಟಿದ್ದಕ್ಕೆ ಸಾರ್ಥಕವಾಗುತ್ತದೆ ಎಂದ ಅವರು ಸಸಿ ನೆಟ್ಟು ಪೋಷಿಸುವ ಮೂಲಕ ಪರಿಸರ ಸಂರಕ್ಷಣೆಯ ಜವಾಬ್ದಾರಿಯನ್ನು ನಿರ್ವಹಿಸಿಬೇಕು ಎಂದರು

ಅರಣ್ಯ ಅಧಿಕಾರಿ ಮಹಾಂತೇಶ ಹಿಪ್ಪರಗಿ ಮಾತನಾಡಿ, ಇಂದು ಅಭಿವೃದ್ಧಿ ನೆಪದಲ್ಲಿ ಪರಿಸರ ಆಳುಗುತ್ತಿದೆ, ಅಭಿವೃದಿಗಾಗಿ ಒಂದು ಮರ ಆಳು ಮಾಡಿದರೆ 5 ಗಿಡ್ಡ ನೆಡುವ ಸಂಕಲ್ಪ ಮಾಡಬೇಕು,



ಮೂಡಲಗಿ: ಪಟ್ಟಣದ ಜ್ಯೋತಿ ಅರ್ಬನ್ ಕ್ರೆಡಿಟ್ ಸೊಸಾಯಿಟಿಯಿಂದ ಹಮ್ಮಿಕೊಂಡಿರುವ ಸಸಿಗಳನ್ನು ನೆಡವ ಕಾರ್ಯಕ್ರಮಕ್ಕೆ ತಹಸೀಲ್ದಾರ್ ಶ್ರೀಶೈಲ್ ಗುಡಮೆ,ಪುರಸಭೆ ಮುಖ್ಯಾಧಿಕಾರಿ ತುಕಾರಾಮ ಮಾದರ, ಸೊಸಾಯಿಟಿ ಅಧ್ಯಕ್ಷ ಮಲ್ಲಪ್ಪ ಮದಗುಣಕಿ ಚಾಲನೆ ನೀಡಿದರು

ರೈತರು ತಮ್ಮ ತಮ್ಮ ಜಮೀನುಗಳ ಬದುವಿನಲ್ಲಿ ಹೆಚ್ಚು ಹೆಚ್ಚು ಗಿಡ್ಡ ನೆಟ್ಟು ಪರಿಸರ ಹಾಳಾಗದಂತೆ ನೋಡಿಕೊಂಡಾಗ ಮಾತ್ರ ಪರಿಸರದಲ್ಲಿ ಸಮತೋಲನ ಕಾಪಾಡಿಕೊಳ್ಳಲು ಸಾಧ್ಯ ಎಂದರು.

ಅಧ್ಯಕ್ಷತೆ ವಹಿಸಿದ್ದ ಜ್ಯೋತಿ ಅರ್ಬನ್ ಕ್ರೆಡಿಟ್ ಸೊಸಾಯಿಟಿ ಅಧ್ಯಕ್ಷ ಮಲ್ಲಪ್ಪ ಮದಗುಣಕಿ ಮಾತನಾಡಿ, ಸೊಸಾಯಿಟಿಯಿಂದ ಸಸಿ ನೆಡುವದರ ಜೊತೆ ಪರಿಸರ ಅರಿವು ಮೂಡಿಸುವ ಕಾರ್ಯವನ್ನು ಮಾಡಲಾಗುತ್ತಿದೆ ಎಂದರು. ಸಮಾರಂಭದಲ್ಲಿ ಪುರಸಭೆ ಮುಖ್ಯಾಧಿ ಕಾರಿ ತುಕಾರಾಮ ಮಾದರ, ಸೊಸೈಟಿಯ ಉಪಾಧ್ಯಕ್ಷ ಬಸವರಾಜ ನೇಮಗೌಡರ, ಅರಣ್ಯ ಅಧಿಕಾರಿ ರಾಜು ಅಮರಾ ಗೋಳ, ಮಹಾಂತೇಶ ಹಿಪ್ಪರಗಿ, ರಾಮಣ್ಣ ಹಂದಿಗುಂದ, ಮಲ್ಲಪ್ಪ ಗಾಣಿಗೇರ, ಈರಪ್ಪ ಬನ್ನೂರ, ಬಸವ ರಾಜ ಪಾಟೀ ಲ, ಸುಭಾಸ ಕಮದಾಳ , ಈರಪ್ಪ ಢವಳೇಶ್ವರ, ಚನ್ನಪ್ಪ ಅಥಣಿ, ಬಸವರಾಜ ಕಬ್ಬುರ, ಬಸವರಾಜ ಹುಚ್ಚನವರ, ಸೊಸಾಯಿಟಿಯ ನಿರ್ದೇಶಕರು ಮತ್ತು ಮುಖ್ಯ ಕಾರ್ಯನಿರ್ಹಣಾಧಿಕಾರಿ ಪ್ರಕಾಶ ರಡರಟ್ಟಿ ಮತ್ತಿತರು ಭಾಗವಹಿಸಿದರು.

## ಅರ್ಜಿ ಆಹ್ವಾನ

**ಬೆಳಗಾವಿ ವಾರ್ತೆ ಗದಗ:** ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ (ನಿ) ಗದಗ ಇವರ ವತಿಯಿಂದ2026-27 ನೇ ಸಾಲಿಗೆ ಮತೀಯ ಅಲ್ಪಸಂಖ್ಯಾತರಾದ (ಕ್ರಿಶ್ಚಿಯನ್ ಸಮುದಾಯವನ್ನು ಹೊರತುಪಡಿಸಿ) ಮುಸ್ಲಿಂ, ಜೈನ್, ಭೌದ್ಧರು, ಸಿಖ್, ಫಾರ್ಸಿ, ಜನಾಂಗದವರಿಗೆ.ಅರಿವು ವಿದ್ಯಾಭ್ಯಾಸ ಸಾಲ (ಪ್ರೇಶ್) ಯೋಜನೆಯಡಿಯಲ್ಲಿ ನಿಗಮದಿಂದ ಸಾಲ ಸೌಲಭ್ಯಗಳನ್ನು ನೀಡಲಾಗುತ್ತಿದೆ.

ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ವತಿಯಿಂದ ಅರಿವು ವಿದ್ಯಾಭ್ಯಾಸ ಸಾಲ ಯೋಜನೆಯಲ್ಲಿಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಏಇಂ ತುಚ ಅಇಖ/ ಓಇಇಖ ನಲ್ಲಿ ಆಯ್ಕೆಯಾಗುವ Medical ( MBBS) , BDS, BE, B.Tech, Bachalor of Archetecture, B.Ayush, Pharmacy, Agriculture Science and Veternary ಇಂತಹ ಕೋರ್ಸಗಳಿಗೆ ಆಯ್ಕೆಯಾದ ಅಲ್ಪಸಂಖ್ಯಾತ ವಿದ್ಯಾರ್ಥಿಗಳು “ಅರಿವು” ವಿಧ್ಯಾಭ್ಯಾಸ ಸಾಲ (ಪ್ರೇಶ್) ಯೋಜನೆಯಡಿ ಶೈಕ್ಷಣಿಕ ಸಾಲವನ್ನು ಪಡೆಯಲು ಅಪೇಕ್ಷಿಸುವ ‘ಅಲ್ಪಸಂಖ್ಯಾತ ವಿದ್ಯಾರ್ಥಿಗಳು ದಿನಾಂಕ:08-05-2026ರಿಂದಆನಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ನಿಗಮದ ವೆಬ್‌ಸೈಟ್:https:kmdconline.karnataka.gov.in ಮೂಲಕ ಅರ್ಜಿ ಸಲ್ಲಿಸಬಹುದು. ಹಾಗೂ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 30-05-2026 ಅಂತ್ಯದವರೆಗೆ ನಿಗಧಿ ಪಡಿಸಲಾಗಿತ್ತು. ಆದರೆ ಕೇಂದ್ರ ಕಛೇರಿಯ ನಿರ್ದೇಶನದ ಅನ್ವಯ ಅಂತಿಮ ದಿನಾಂಕವನ್ನು 15-06-2026 ರ ವರೆಗೆ ವಿಸ್ತರಿಸಲಾಗಿದೆ.

ವಿದ್ಯಾರ್ಥಿಗಳು ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಿ ಸಂಬಂಧಿಸಿದ ಎಲ್ಲಾ ದಾಖಲಾತಿಗಳನ್ನು ಜಿಲ್ಲಾ ವ್ಯವಸ್ಥಾಪಕರು ಕರ್ನಾಟಕ ಅಲ್ಪಸಂಖ್ಯಾತರ ‘ಅಭಿವೃದ್ಧಿ ನಿಗಮ, ನಿಯಮಿತ ಮೌಲಾನಾ ಆಜಾದ ಅಲ್ಪಸಂಖ್ಯಾತರ ಭವನ 1ನೇ ಮಹಡಿಜಿಲ್ಲಾ ನ್ಯಾಯಲಯದ ಎದುರುಗಡೆ, ಹುಬ್ಬಳ್ಳಿ ರಸ್ತೆ, ಗದಗ ಜಿಲ್ಲೆ ಈ ಕಛೇರಿಗೆ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ:08372-295147 ಸಂಪರ್ಕಿಸಬಹುದಾಗಿದೆ.

## ಕುಂಟೋಜಿ ಗ್ರಾಮದಲ್ಲಿ 118 ಜನರಿಗೆ ಉಚಿತ ಎಕ್ಸರೇ ಪರೀಕ್ಷೆ: 'ಕ್ಷಯ ಮುಕ್ತ ಭಾರತ' ಅಭಿಯಾನ ಯಶಸ್ವಿ



**ಬೆಳಗಾವಿ ವಾರ್ತೆ ಮುದ್ದೇಬಿಹಾಳ:** ತಾಲೂಕಿನ ಕುಂಟೋಜಿ ಗ್ರಾಮದ ಆರೋಗ್ಯ ಉಪಕೇಂದ್ರದಲ್ಲಿ, ಗರಸಂಗಿ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಗ್ರಾಮ ಪಂಚಾಯಿತಿ ಸಂಯುಕ್ತಾಶ್ರಯದಲ್ಲಿ 100 ದಿನಗಳ 'ಕ್ಷಯ ಮುಕ್ತ ಭಾರತ' ಅಭಿಯಾನದ ಅಂಗವಾಗಿ ಹಮ್ಮಿಕೊಂಡಿದ್ದ 'ಉಚಿತ ಎಕ್ಸರೇ' ಕಾರ್ಯಕ್ರಮವು ಯಶಸ್ವಿಯಾಗಿ ಜರುಗಿತು. ಈ ಶಿಬಿರದಲ್ಲಿ ಒಟ್ಟು 118 ಜನರು ಉಚಿತ ಎಕ್ಸರೇ ಪರೀಕ್ಷೆಯ ಸದುಪಯೋಗ ಪಡೆದುಕೊಂಡರು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಗರಸಂಗಿ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ತೈಸಿನ್ ಶಿವಣಗಿ, "ಕ್ಷಯ ರೋಗಿಗಳು ನಿರಂತರ 6 ತಿಂಗಳು ಸೂಕ್ತ ಚಿಕಿತ್ಸೆ ಪಡೆದರೆ ರೋಗದಿಂದ ಸಂಪೂರ್ಣ ಮುಕ್ತಿ ಹೊಂದಬಹುದು. ನಿಯಮಿತವಾಗಿ ಔಷಧ ತೆಗೆದುಕೊಳ್ಳದಿದ್ದರೆ ಅಡ್ಡ ಪರಿಣಾಮಗಳು ಉಂಟಾಗುವ ಅಪಾಯವಿದೆ. ಎರಡು ವಾರಕ್ಕೂ ಹೆಚ್ಚು ಕಾಲ ಕೆಮ್ಮು, ಜ್ವರ ಕಂಡುಬಂದಲ್ಲಿ ನಿರ್ಲಕ್ಷ್ಯ ಮಾಡದೆ ತಕ್ಷಣ ಹತ್ತಿರದ ಆಸ್ಪತ್ರೆಗಳಿಗೆ ಭೇಟಿ ನೀಡಿ ಕ್ಷಯರೋಗ ಪರೀಕ್ಷೆ ಮಾಡಿಸಿಕೊಳ್ಳಬೇಕು," ಎಂದು ಸಲಹೆ ನೀಡಿದರು.

"ಕ್ಷಯರೋಗ ಯಾರಿಗೆ ಬೇಕಾದರೂ ಬರಬಹುದು. ಅದರಲ್ಲೂ ಎಚ್‌ಐವಿ ಸೋಂಕಿತರು, ಮಧುಮೇಹ ಪೀಡಿತರು ಹಾಗೂ ಧೂಮಪಾನ ಮಾಡುವವರು ಬಹುಬೇಗ ಸೋಂಕಿಗೆ ಒಳಗಾಗುತ್ತಾರೆ. ಕ್ಷಯರೋಗಿ ಕೆಮ್ಮಿದಾಗ ಮತ್ತು ಸೀನಿದಾಗ ಹೊರಬರುವ ರೋಗಾಣುಗಳು ಗಾಳಿಯ ಮೂಲಕ ಆರೋಗ್ಯವಂತ ವ್ಯಕ್ತಿಯ ದೇಹ ಸೇರಿ ಸೋಂಕು ಹರಡುತ್ತದೆ. ಆದರೆ ಸರಿಯಾದ ಸಮಯಕ್ಕೆ ಸೂಕ್ತ ಚಿಕಿತ್ಸೆ ಪಡೆಯುವುದರಿಂದ ರೋಗವನ್ನು ಸಂಪೂರ್ಣವಾಗಿ ನಿಯಂತ್ರಿಸಬಹುದು. ಕ್ಷಯರೋಗಕ್ಕೆ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಉಚಿತ ಚಿಕಿತ್ಸಾ ಸೌಲಭ್ಯಗಳನ್ನು ನೀಡಲಾಗುತ್ತಿದೆ," ಎಂದು ಅವರು ಮಾಹಿತಿ ನೀಡಿದರು.

ಗರಸಂಗಿ ಪ್ರಾಥಮಿಕ ಆರೋಗ್ಯ ಕೇಂದ್ರದ ಮೇಲ್ವಿಚಾರಕ ಎಂ.ಎಸ್. ಗೌಡರ ಮಾತನಾಡಿ, ನಗರ, ಹಳ್ಳಿ, ಪಟ್ಟಣ ಸೇರಿ ಎಲ್ಲ ಕಡೆಗೂ ಕ್ಷಯ ರೋಗಿಗಳನ್ನು ಪತ್ತೆಹಚ್ಚುವ ಕಾರ್ಯವನ್ನು ತಾಲೂಕಿನಾದ್ಯಂತ ಆಯ್ದ ಗ್ರಾಮಗಳಲ್ಲಿ ಹಮ್ಮಿಕೊಳ್ಳಲಾಗುತ್ತಿದೆ. ಕ್ಷಯರೋಗದ ಲಕ್ಷಣಗಳು ಇದ್ದವರು ಹಾಗೂ ದುರ್ಬಲ ವರ್ಗದವರು ತಪಾಸಣೆಗೆ ಒಳಪಟ್ಟು, ಸರ್ಕಾರ ನೀಡುತ್ತಿರುವ ಈ ಉಚಿತ ಸೌಲಭ್ಯದ ಸದುಪಯೋಗವನ್ನು ಪಡೆದುಕೊಳ್ಳಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಎನ್.ಜಿ. ತಾಳಿಕೋಟಿ, ಜಿಲ್ಲಾ ಕಾರ್ಯಕ್ರಮ ಕೋರ್ಡಿನೇಟರ್ ಮಂಜುನಾಥ ಮಾಮನೆ, ಆರೋಗ್ಯ ನಿರೀಕ್ಷಕ ಎಸ್.ಬಿ. ಹೂಗಾರ, ಛಾಯಾಚಿತ್ರಣಾಧಿಕಾರಿಗಳಾದ ಈರಣ್ಣ ಕಸಬೇಗೌಡರ, ಬಸವರಾಜ್ ಕುಂಟೋಜಿ, ಬಸವರಾಜ್ ಹವೇರಿ, ಎಸ್.ಟಿ.ಎಸ್. ಶಿವರಾಜ ದೀಕ್ಷಿತ, ವಿ.ಕೆ. ಪಾಟೀಲ್, ಝೆಡ್.ಎಮ್. ಬೀಳಗಿ, ಮಲ್ಲನಗೌಡ ಬಿರಾದರ ಸೇರಿದಂತೆ ಗರಸಂಗಿ ಪ್ರಾಥಮಿಕ ಆರೋಗ್ಯ ಕೇಂದ್ರದ ಸಿಬ್ಬಂದಿ ವರ್ಗ ಹಾಗೂ ಆಶಾ ಕಾರ್ಯಕರ್ತೆಯರು ಉಪಸ್ಥಿತರಿದ್ದರು.

# ಗಿಡಗಳನ್ನು ಸಂರಕ್ಷಿಸುವುದು ಪ್ರತಿಯೊಬ್ಬರ ಕರ್ತವ್ಯ

**ಬೆಳಗಾವಿ ವಾರ್ತೆ ಗದಗ:** ಪರಿಸರ ದಿನಾಚರಣೆ ಮಾಡಿದರೆ ಭೂಮಿತಾಯಿಯ ಆಚರಣೆ ಮಾಡಿದಂತೆ. ಗಿಡಗಳನ್ನು ಸಂರಕ್ಷಿಸುವುದು ಎಲ್ಲರ ಜವಾಬ್ದಾರಿಯಾಗಿದೆ ಬೇರೆ ಬೇರೆ ಸ್ಥಳಗಳಲ್ಲಿ ಗಿಡಗಳನ್ನು ಬೆಳೆಸಲು ಹೆಚ್ಚು ಆಧ್ಯತೆ ನೀಡಬೇಕು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್.ಶಿವನಗೌಡ್ರ ತಿಳಿಸಿದರು.

ಗದಗ ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಗದಗ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಪ್ರಾದೇಶಿಕ ಕಛೇರಿ, ಗದಗ, ಸಾರ್ವಜನಿಕ ಶಿಕ್ಷಣ ಇಲಾಖೆ, ಹಾಗೂ ಸಿ.ಡಿ.ಓ ಜೈನ್ ಶಿಕ್ಷಣ ಸಂಸ್ಥೆ, ಗದಗ ಇವರುಗಳ ಸಹಯೋಗದೊಂದಿಗೆ ಜೂನ್ 12 ರಂದು ಸಿ.ಡಿ.ಓ. ಜೈನ್ ಶಿಕ್ಷಣ ಸಂಸ್ಥೆ ಗದಗ ಜಿಲ್ಲೆಯಲ್ಲಿ ವಿಶ್ವ ಪರಿಸರ ದಿನಾಚರಣೆಯ ಸಮಾರೋಪ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ವಾಯು ಮಾಲಿನ್ಯ ತಡೆಯುವ ದ್ಯೇಯದೊಂದಿಗೆ ಪರಿಸರವನ್ನು ರಕ್ಷಿಸಬೇಕು ಗಿಡ ಮರಗಳನ್ನು ಬೆಳೆಸಲು ಎಲ್ಲರೂ ಕೈ ಜೋಡಿಸಬೇಕೆಂದು ಸಭೆಯಲ್ಲಿ ತಿಳಿಸಿದರು. ಮಕ್ಕಳ ಏಳಿಗೆಗೆ ಇಂಥಹ ಸ್ಪರ್ದೆಗಳು ತುಂಬಾ ಅನುಕೂಲವಾಗುತ್ತವೆ, ಮಹಾತ್ಮ ಗಾಂಧಿಜಿಯವರು ಭೂಮಿ ನಮ್ಮ ಆಶೆಗಳನ್ನು ಇಡೇರಿಸುತ್ತದೆ ವಿನಃ ನಮ್ಮ ದುರಾಶೆಗಳನ್ನಲ್ಲ ಎಂಬ ಸಂದೇಶವನ್ನು ಹೇಳಿದ್ದಾರೆ ಎಂದು ತಿಳಿಸಿದರು, ಮನುಷ್ಯ ತನ್ನ ಲಾಭಕ್ಕೆ ಭೂಮಿಯನ್ನು ಅಗೆಯುತ್ತಾನೆ ಇದರಿಂದ ಉಷ್ಣತೆ ಹೆಚ್ಚಾಗಿ ಅದರಿಂದ ಮಳೆ ಹೆಚ್ಚು ಕಡಿಮೆ ಆಗುವುದು, ಮೊಬೈಲ್ ಬಳಕೆಯಿಂದ ಮಕ್ಕಳಲ್ಲಿ ಆಸಕ್ತಿ ಕಡಿಮೆ ಆಗುವುದು, ಸರಿಯಾದ ಸಮಯಕ್ಕೆ ಊಟ ಮಾಡದೇ ಇರುವುದು ಅನಾರೂಗ್ಯಕ್ಕೆ ಕಾರಣವಾಗುತ್ತದೆ, ಇದನ್ನು ಎಷ್ಟು ಬೇಕೋ ಅಷ್ಟೇ ಬಳಸಲು ಸಲಹೆ ನೀಡಿದರು. ಇಂಥಹ ಸ್ಪರ್ದೆಯಲ್ಲಿ ಭಾಗಿಯಾಗಿ ಜಯಶೀಲರಾಗಲು ಪ್ರಯತ್ನಿಸಿ, ಜೀವನದಲ್ಲಿ ಎಷ್ಟು ಅವಕಾಶಗಳು ಇವೆಯೋ



ಅದಕ್ಕಿಂತ ಹೆಚ್ಚು ಅವಕಾಶಗಳನ್ನು ಹಾಳಾಗಲು ಇರುತ್ತವೆ ತಂದೆ ತಾಯಿಯು ಮಕ್ಕಳ ಬೆಳವಣಿಗೆಯ ಬಗ್ಗೆ ಗಮನ ಹರಿಸಬೇಕು, ಪ್ರತಿಯೊಬ್ಬರೂ ತಮ್ಮ ತಾಯಿಯ ಹೆಸರಿನಲ್ಲಿ 1 ಗಿಡ ನೆಟ್ಟು ಪೋಷಿಸಿ ಅದು ಎಲ್ಲರಿಗೂ ಅನುಕೂಲವಾಗುತ್ತದ ಎಂದು ಹೇಳಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಶ್ರೀಮತಿ ಗೀತಾ ಕುಲಕರ್ಣಿ ವಿಷಯ ಪರಿವೀಕ್ಷಕರು ಉಪ ನಿರ್ದೇಶಕರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಗದಗ ಇವರು ಮಾತನಾಡಿ ಪರಿಸರವನ್ನು ರಕ್ಷಿಸುವುದು ಪ್ರತಿಯೊಬ್ಬ ನಾಗರಿಕನ ಕರ್ತವ್ಯವಾಗಿದೆ. ವಾಯು ಮಾಲಿನ್ಯ ತಡೆಗಟ್ಟುವಲ್ಲಿ ಎಲ್ಲರೂ ಶ್ರಮಿಸಬೇಕೆಂದು ಮತ್ತು ನಮ್ಮ ಸುತ್ತಮುತ್ತಲಿನ ಪ್ರದೇಶದಲ್ಲಿ ಮರಗಳನ್ನು ಬೆಳೆಸುವುದರ ಜೊತೆಗೆ ಪರಿಸರವನ್ನು ಸಂರಕ್ಷಿಸಬೇಕೆಂದು ಹಾಗೂ ಮರಗಳನ್ನು ಕಡಿಯುವುದರಿಂದ ನಮ್ಮ ವಿನಾಶಕ್ಕೆ ನಾವೇ ಕಾರಣರಾಗುತ್ತಿದ್ದೇವೆ ಆದುದರಿಂದ ಎಲ್ಲಾ ನಾಗರಿಕರು ಮತ್ತು ಶಾಲಾ ವಿದ್ಯಾರ್ಥಿಗಳಲ್ಲದೇ ದೇಶದ ಬೆನ್ನೆಲುಬಾದ ರೈತಾಪಿ ವರ್ಗದವರು ತಮ್ಮ ಜಮೀನಿನ ಬದುಗಳಲ್ಲಿ ಮರಗಳನ್ನು ಬೆಳೆಸುವುದರ ಜೊತೆಗೆ ನಾಡನ್ನು ಉಳಿಸಬೇಕೆಂದು ತಿಳಿಸಿದರು. ಪ್ಲಾಸ್ಟಿಕ್ ಮುಕ್ತ ರಾಜ್ಯವನ್ನು ಮಾಡಲು ಇಂದಿನಿಂದಲೇ ನಿರ್ಧಾರ ಮಾಡಲು ಸಲಹೆ ನೀಡಿದರು.

ಪರಿಸರ ಅಧಿಕಾರಿ ಲೋಹಿತ್ ಕುಮಾರ್. ಪಿ. ಜೆ, ಸರ್ವರನ್ನು ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡುತ್ತಾ ಪರಿಸರ ರಕ್ಷಣೆಗೆ ಸಂಬಂಧಿಸಿದ ಕಾನೂನುಗಳ ಬಗ್ಗೆ ಅರಿವು ಮೂಡಿಸಿದರು. ಇಂದಿನ ದಿನಮಾನಗಳಲ್ಲಿ ಸಾರ್ವಜನಿಕರು ಪರಿಸರದ ಉಳಿವಿಗಾಗಿ ಹೆಚ್ಚಿನ ಕಾಳಜಿ ವಹಿಸಬೇಕು ಹಾಗೂ ಹಸಿರು ಸಂಪತ್ತನ್ನು ಪಡೆಯಲು ಹಾಗೂ ವಾತಾವರಣದ ವಾಯು ಮಾಲಿನ್ಯವನ್ನು ಮಣಿಸಲು ಹೆಚ್ಚು ಹೆಚ್ಚಾಗಿ ಗಿಡ ಮರಗಳನ್ನು ಬೆಳೆಸಿ ನಿಸರ್ಗಕ್ಕೆ ಕೊಡುಗೆಯನ್ನು ನೀಡುವುದಲ್ಲದೇ ಮನೆಗೊಂದು ಮರ ಬೆಳೆಸಿ ಉಳಿಸಿ ಎಂದು ತಿಳಿಸಿದರು.

ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಪ್ರೌಢ ಶಾಲಾ ವಿಭಾಗದ ವಿದ್ಯಾರ್ಥಿ ವಿಧ್ಯಾರ್ಥಿನಿಯರಿಗೆ ನಿಬಂಧ ಹಾಗೂ ಚಿತ್ರಕಲೆ ಸ್ಪರ್ಧೆಯನ್ನು ಹಮ್ಮಿಕೊಳ್ಳಲಾಗಿತ್ತು. ಸದರಿ ಸ್ಪರ್ದೆಗಳಿಗೆ ನಗರದ ಸುಮಾರು 300 ವಿಧ್ಯಾರ್ಥಿಗಳು ಭಾಗವಹಿಸಿದ್ದರು.

ವಿವಿಧ ಶಾಲಾ ಶಿಕ್ಷಕ ಮತ್ತು ಶಿಕ್ಷಕಿಯರು ಹಾಗೂ ವಿಧ್ಯಾರ್ಥಿ/ ವಿಧ್ಯಾರ್ಥಿನಿಯರು ಸಮಾರಂಭದಲ್ಲಿ ಭಾಗವಹಿದ್ದರು ಇದೇ ಸಂದರ್ಭದಲ್ಲಿ ವಿಜೇತರಾದವರಿಗೆ ಬಹುಮಾನ ಮತ್ತು ಪ್ರಮಾಣ ಪತ್ರವನ್ನು ನೀಡಿ ಸತ್ಕರಿಸಲಾಯಿತು.

ಸ್ಪರ್ದೆಗಳಲ್ಲಿ ವಿಜೇತರಾದ ವಿಧ್ಯಾರ್ಥಿ ವಿಧ್ಯಾರ್ಥಿನಿಯರ ವಿವರ ಈ ಕೆಳಕಂಡಂತಿದೆ.

ಚಿತ್ರಕಲೆ ಸ್ಪರ್ದೆ ಪ್ರಾಥಮಿಕ ಶಾಲಾ ವಿಭಾಗ: ಪ್ರಥಮ–ಕುಮಾರಿ ಅಕ್ಷರಾ ಎಂ ಬೆಲ್ಲದ, ಸಿ.ಡಿ.ಓ ಜೈನ್ ಆಂಗ್ಲ ಮಧ್ಯಮ ಶಾಲೆ, ಗದಗ ; ದ್ವಿತೀಯ– ಕುಮಾರಿ. ಮೀನಾಕ್ಷಿ ಕೇಂಬ್ಲಿ ಸೇಂಟ್ ಜಾನ್ ಸ್ಕೂಲ, ಬೆಟಗೇರಿ, ; ತೃತೀಯ– ಕುಮಾರಿ. ಸಫಲ ಎಸ್ ರಾಯಭಾಗಿ, ಬಸವೇಶ್ವರ ಪ್ರಾಥವಿಶಾಲೆ, ಗದಗ.

ಚಿತ್ರಕಲೆ ಸ್ಪರ್ದೆ ಪ್ರೌಢ ಶಾಲಾ ವಿಭಾಗ .ಪ್ರಥಮ–ಕುಮಾರಿ ಚೌಡಮ್ಮ ಎಸ್ ಪೂಸಾ, ಸೇಂಟ್ ಜಾನ್ ಸ್ಕೂಲ, ಬೆಟಗೇರಿ.; ದ್ವಿತೀಯ– ಕುಮಾರ. ರಾಯಿಸ್ ಮ ಹಳ್ಳಿಕೇರಿ ಬಸವೇಶ್ವರ ಪ್ರಾಥವಿಶಾಲೆ, ಗದಗ.; ತೃತೀಯ– ಕುಮಾರಿ ಸೋನಲ್ ಬೇವಿನಕಟ್ಟಿ, ಮಹಾವೀರ ಪ್ರೌಢ ಶಾಲೆ, ಗದಗ.; ಸಮಾಧಾನಕರ ಬಹುಮಾನ– ಕುಮಾರಿ ವೈಷ್ಣವಿ ವಿ ಪೂಜಾರಿ, ಬಾಲಕಿಯರ ಸರ್ಕಾರಿ ಪ್ರೌಢ ಶಾಲೆ, ಲಕ್ಕುಂಡಿ,

ಪ್ರಬಂಧ ಸ್ಪರ್ಧೆ ಪ್ರಾಥಮಿಕ ಶಾಲಾ ವಿಭಾಗ.:–ಪ್ರಥಮ– ಕುಮಾರ ಅಕಿಫ್ ಜಿ ಬೆಟಗೇರಿ, ಮಹಾವೀರ ಜೈನ್ ಪ್ರಾಥಮಿಕ ಶಾಲೆ, ಗದಗ; ದ್ವಿತೀಯ– ಕುಮಾರಿ ನಿಧಿ ಗಿಡ್ಡಕೆಂಚನ್ನವರ, ಬಸವೇಶ್ವರ ಪ್ರಾಥವಿಶಾಲೆ, ಗದಗ.; ತೃತೀಯ– ಕುಮಾರಿ ಕೀರ್ತಿ ಕೊಟ್ರಯ್ಯ ವಸ್ತ್ರದ, ಸೇಂಟ್ ಜಾನ್ ಸ್ಕೂಲ, ಬೆಟಗೇರಿ; ಸಮಾಧಾನಕರ ಬಹುಮಾನ– ಕುಮಾರಿ ಸಮೀಕ್ಷಾ ಯು ಎಚ್ ಸಿ.ಡಿ.ಓ. ಜೈನ್ ಆಂಗ್ಲ ಮಾಧ್ಯಮ ಶಾಲೆ, ಗದಗ.

**ಪ್ರಬಂಧ ಸ್ಪರ್ಧೆ ಪ್ರೌಢ ಶಾಲಾ ವಿಭಾಗ.;** ಪ್ರಥಮ– ಕುಮಾರಿ ಶ್ರಾವಣಿ ಆರ್ ಗೌಡರ, ಬಸವೇಶ್ವರ ಪ್ರೌಢ, ಶಾಲೆ, ಗದಗ.;

ದ್ವಿತೀಯ–ಕುಮಾರಿ. ವಿಜಯಲಕ್ಷ್ಮೀ ಅ ಚಳ್ಳಮರದ, ಜೆ.ಸಿ.ಎಸ್. ಶಾಸ್ತ್ರೀ, ಪ್ರೌಢ ಶಾಲೆ, ಗದಗ.

ತೃತೀಯ–ಕುಮಾರಿ. ಶೃಷ್ಟಿ. ಈ ಗುಡಿಸಾಗರ, ಹೆಚ್.ಸಿ.ಇ.ಎಸ್. ಎಮ್. ವಿ, ಆಯ್ ಬಾಲಕಿಯರ ಪ್ರೌಢ ಸಾಲೆ, ಬೆಟಗೇರಿ.

ಸಮಾಧಾನಕರ ಬಹುಮಾನ– ಕುಮಾರಿ ಜಾಹ್ನವಿ ಬಡಿಗೇರ, ಸೇಂಟ್ ಜಾನ್, ಪ್ರೌಢ ಶಾಲೆ, ಬೆಟಗೇರಿ,

# ಎಸ್‌ಎಸ್‌ಎಲ್‌ಸಿ ಸಾಧಕ ವಿದ್ಯಾರ್ಥಿಗಳಿಗೆ ಸನ್ಮಾನ

**ಬೆಳಗಾವಿ ವಾರ್ತೆ ಗದಗ:** ವಿದ್ಯಾರ್ಥಿಗಳ ಜೀವನವನ್ನು ರೂಪಿಸುವಲ್ಲಿ 10ನೇ ತರಗತಿಯು ಅತ್ಯಂತ ಪ್ರಮುಖ ಘಟ್ಟವಾಗಿದೆ. ಇಡೀ ರಾಜ್ಯದ ವಿದ್ಯಾರ್ಥಿಗಳು ಒಂದೇ ವೇದಿಕೆಯಲ್ಲಿ ಎದುರಿಸುವ ಈ ಪರೀಕ್ಷೆಯಲ್ಲಿ ನಮ್ಮ ಜಿಲ್ಲೆಯ ವಿದ್ಯಾರ್ಥಿಗಳು ಅತ್ಯುತ್ತಮ ಸಾಧನೆ ಮಾಡಿರುವುದು ಹೆಮ್ಮೆಯ ವಿಷಯ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಹೇಳಿದರು.

ನಗರದ ಭಾರತೀಯ ವೈದ್ಯಕೀಯ ಸಂಘ,ಹಾಗೂ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ, ಶಾಲಾ ಶಿಕ್ಷಣ ಇಲಾಖೆ, ಇವರ ಸಹಯೋಗದಲ್ಲಿ "ಶತಮಾನೋತ್ಸವ ಸಂಭ್ರಮ"ನಿಮಿತ್ಯ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್ ನಲ್ಲಿ 2025–26ನೇ ಸಾಲಿನ ಪ್ರತಿಭಾವಂತ ಎಸ್.ಎಸ್.ಎಲ್.ಸಿ. ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಗದಗದ ಐಎಂಎ ಸಂಸ್ಥೆಗೆ 100 ವರ್ಷಗಳಿಗಿಂತಲೂ ಹೆಚ್ಚಿನ ಸುದೀರ್ಘ ಇತಿಹಾಸವಿದೆ. ಅಖಿಲ ಭಾರತ ಐಎಂಎ ಸಂಸ್ಥೆ ಅಸ್ತಿತ್ವಕ್ಕೆ ಬರುವುದಕ್ಕಿಂತ ಎರಡು ವರ್ಷಗಳ ಮುಂಚಿತವಾಗಿಯೇ ಗದಗ್‌ನಲ್ಲಿ ವೈದ್ಯರು ಒಟ್ಟಾಗಿ ಸೇರಿ ಈ ಸಂಸ್ಥೆಯನ್ನು ಕಟ್ಟಿದ್ದರು ಎಂಬುದು ಹೆಮ್ಮೆಯ ಸಂಗತಿ. ಅಂದಿನ ಕಾಲದ ವೈದ್ಯರು ಕೇವಲ ವೃತ್ತಿಗಷ್ಟೇ ಸೀಮಿತವಾಗದೆ, ಸಮಾಜಕ್ಕೆ ಮರಳಿ ಏನನ್ನಾದರೂ ನೀಡಬೇಕು (ಉತುಟಿರ ಛಚಿಛಿಞ ಣಾ ಣಛುಜಣಥಿ) ಎಂಬ ದೊಡ್ಡ ದೂರದೃಷ್ಟಿ ಹೊಂದಿದ್ದರು. ಅಂತಹ ಐತಿಹಾಸಿಕ ನೆಲದಲ್ಲಿ ಅಂದಿನಿಂದ ಇಂದಿನವರೆಗೂ ವೈದ್ಯರು ತಮ್ಮ ಸಾಮಾಜಿಕ ಸೇವೆಯ ಪರಂಪರೆಯನ್ನು ನಿರಂತರವಾಗಿ ಮುಂದುವರಿಸಿಕೊಂಡು ಬಂದಿದ್ದಾರೆ" ಎಂದರು.

ವಿದ್ಯಾರ್ಥಿಗಳ ಜೀವನವನ್ನು ರೂಪಿಸುವಲ್ಲಿ 10ನೇ ತರಗತಿಯು ಅತ್ಯಂತ ಪ್ರಮುಖ ಘಟ್ಟವಾಗಿದೆ. ಇಡೀ ರಾಜ್ಯದ ವಿದ್ಯಾರ್ಥಿಗಳು ಒಂದೇ ವೇದಿಕೆಯಲ್ಲಿ ಎದುರಿಸುವ ಈ ಪರೀಕ್ಷೆಯಲ್ಲಿ ನಮ್ಮ ಜಿಲ್ಲೆಯ ವಿದ್ಯಾರ್ಥಿಗಳು ಅತ್ಯುತ್ತಮ ಸಾಧನೆ




ಮಾಡಿರುವುದು ಹೆಮ್ಮೆಯ ವಿಷಯ. ಸಾಧಕ ವಿದ್ಯಾರ್ಥಿಗಳಿಗೆ ಐಎಂಎ ಸಂಸ್ಥೆಯು ಪ್ರೋತ್ಸಾಹಧನ ನೀಡಿ ಗೌರವಿಸುತ್ತಿರುವುದು, 'ನಾವು ನಿಮ್ಮ ಸಾಧನೆಯ ಹಾದಿಯಲ್ಲಿ ಜೊತೆಗಿದ್ದೇವೆ' ಎಂಬ ಧೈರ್ಯ ತುಂಬುವ ಉತ್ತಮ ಕೆಲಸವಾಗಿದೆ" ಎಂದರು.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಹಂಗಾಮಿ ಕುಲಪತಿ ಹಾಗೂ ಕುಲಸಚಿವ ಪ್ರೊ ಡಾ.ಸುರೇಶ ನಾಡಗೌಡರ ಮಾತನಾಡಿ ವಿದ್ಯಾರ್ಥಿ ಜೀವನದಲ್ಲಿ ಕೇವಲ ಅಂಕಗಳನ್ನು ಗಳಿಸುವುದು ಮಾತ್ರ ಮುಖ್ಯವಲ್ಲ. ಅದರೊಂದಿಗೆ ಉತ್ತಮ ನಡತೆ (ಆಟಿಟ್ಯೂಡ್) ಮತ್ತು ಕೃತಜ್ಞತಾ ಭಾವ (ಗ್ರಾ ??ಟಿಟ್ಯೂಡ್) ಇರಬೇಕು. ನಮ್ಮನ್ನು ಬೆಳೆಸಿದ ಪೋಷಕರಿಗೆ ಹಾಗೂ ವಿದ್ಯೆ ಕಲಿಸಿದ ಗುರುಗಳಿಗೆ ಸದಾ ಕೃತಜ್ಞರಾಗಿದ್ದಾಗ ಮಾತ್ರ ಜೀವನದಲ್ಲಿ ಇನ್ನಷ್ಟು ಹೆಚ್ಚಿನ ಸಾಧನೆ ಮಾಡಲು ಸಾಧ್ಯ" ಎಂದು ಹೇಳಿದರು.

"ಗದಗ ಜಿಲ್ಲೆಯ ವಿವಿಧ ತಾಲೂಕುಗಳ ಶಾಲೆಗಳಲ್ಲಿ ವಿಶೇಷ ಸ್ಥಾನ ಪಡೆದು, ಅತಿ ಹೆಚ್ಚು ಅಂಕ ಗಳಿಸುವ ಮೂಲಕ ಜಿಲ್ಲೆಗೆ ಕೀರ್ತಿ ತಂದ ವಿದ್ಯಾರ್ಥಿಗಳ ಸಾಧನೆ ಹೆಮ್ಮೆಯ ವಿಷಯವಾಗಿದೆ. ಇಂದಿನ ದಿನಗಳಲ್ಲಿ ಕೇವಲ ಮೆಡಿಕಲ್ ಅಥವಾ ಇಂಜಿನಿಯರಿಂಗ್ ಕ್ಷೇತ್ರ ಮಾತ್ರವಲ್ಲದೆ ಕಾನೂನು, ಉದ್ಯಮ, ಸಮಾಜ ಸೇವೆ ಸೇರಿದಂತೆ ಪ್ರತಿಯೊಂದು ಕ್ಷೇತ್ರದಲ್ಲೂ ಪ್ರತಿಭಾವಂತರಿಗೆ ಅಪಾರ ಅವಕಾಶಗಳಿವೆ. ವಿದ್ಯಾರ್ಥಿಗಳು ತಮ್ಮ ಆಸಕ್ತಿಯ ಕ್ಷೇತ್ರದಲ್ಲಿ ಜ್ಞಾನವನ್ನು ವಿಸ್ತರಿಸಿಕೊಂಡು ದೇಶದ ಹಾಗೂ ಸಮಾಜದ ಒಳಿತಿಗಾಗಿ ಶ್ರಮಿಸಬೇಕು" ಎಂದು ಕರೆ ನೀಡಿದರು.

"ಇಂದಿನ ಜಾಗತೀಕರಣದ ಯುಗದಲ್ಲಿ ಕೇವಲ ಅಂಕಗಳು ಅಥವಾ ಪದವಿ ಪ್ರಮಾಣ ಪತ್ರಗಳಿದ್ದರೆ ಸಾಲದು, ಉತ್ತಮ ಉದ್ಯೋಗ ಗಿಟ್ಟಿಸಿಕೊಳ್ಳಲು ಕೌಶಲ್ಯಗಳು ಹಾಗೂ ಸಂವಹನ ಕಲೆ ಅತ್ಯಗತ್ಯ. ಅದರಲ್ಲೂ ವಿಶೇಷವಾಗಿ ಗ್ರಾಮೀಣ ಭಾಗದಿಂದ ಬಂದು, ಮಾತೃಭಾಷೆಯಲ್ಲಿ ಓದಿದ ವಿದ್ಯಾರ್ಥಿಗಳಲ್ಲಿ ಅಪಾರ ಜ್ಞಾನವಿದ್ದರೂ, ಸಂವಹನ ಕಲೆಯ ಕೊರತೆಯಿಂದಾಗಿ ಹಿಂಜರಿಯುತ್ತಾರೆ. ವಿದ್ಯಾರ್ಥಿಗಳು ಕನ್ನಡ, ಇಂಗ್ಲಿಷ್, ಹಿಂದಿ ಸೇರಿದಂತೆ ಎಲ್ಲಾ ಭಾಷೆಗಳ ಮೇಲೆಯೂ ಪ್ರಭುತ್ವ ಸಾಧಿಸಿ, ತಮ್ಮ ಸಂವಹನ ಕಲೆಯನ್ನು ಉತ್ತಮ ಪಡಿಸಿಕೊಳ್ಳಬೇಕು" ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಇದೆ ಸಂದರ್ಭದಲ್ಲಿ ಎಸ್.ಎಸ್.ಎಲ್.ಸಿ. ಪರೀಕ್ಷೆ ಯಲ್ಲಿ ಅತಿ ಹೆಚ್ಚು ಅಂಕ ಪಡೆದು ಜಿಲ್ಲೆ ಹಾಗೂ ತಾಲೂಕಿಗೆ ಪ್ರಥಮ, ದ್ವಿತೀಯ, ತೃತೀಯ ಸ್ಥಾನ ಪಡೆದ ವಿದ್ಯಾರ್ಥಿಗಳಿಗೆ ಸನ್ಮಾನಿಸಿದರು.

ವೆಂಕಟೇಶ ಆಲ್ಕೋಡ ಹಾಗೂ ತಂಡದಿಂದ ನಾಡಗೀತೆ ಪ್ರಸ್ತುತ ಪಡಿಸಿದರು. ಐಎಂಎ ಅಧ್ಯಕ್ಷ ಡಾ.ಶ್ರೀಧರ ಕುರಡಗಿ ಅವರು ಸರ್ವರನ್ನು ಸ್ವಾಗತಿಸಿದರು. ಅಕ್ಷತಾ ಕಟ್ನಳ್ಳಿಮತ್ತು ಶಿವಕುಮಾರ ಹೊಸಳ್ಳಿ ಕಾರ್ಯಕ್ರಮವನ್ನು ನಿರೂಪಿಸಿದರು.

ಈ ಕಾರ್ಯಕ್ರಮದಲ್ಲಿ ಐಎಂಎ ಶತಮಾನೋತ್ಸವದ ಅಧ್ಯಕ್ಷ ಎಸ್.ಆರ್.ನಾಗನೂರು, ಶತಮಾನೋತ್ಸವ ಸಮಿತಿ ಕಾರ್ಯದರ್ಶಿ ಡಾ. ಪವನ್ ಪಾಟೀಲ ಹಾಗೂ ಐಎಂಎ ಕಾರ್ಯದರ್ಶಿ ಡಾ. ರಾಹುಲ್ ಶಿರೋಳ, ಡಾ.ಪ್ರಭಾ ದೇಸಾಯಿ, ಡಾ.ರೇಷ್ಮಾ ಪದ್ಮಶ್ರೀ ಪುರಸ್ಕೃತ ವಿ.ಆರ್. ಗೌರಿಶಂಕರ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್.ಬುರುಡಿ, ಶಿಕ್ಷಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.



ಧಾರವಾಡ: ಜಿಲ್ಲಾಧಿಕಾರಿಗಳಾದ ಆರ್ ಸ್ನೇಹಲ್ ಹಾಗೂ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ್ ಪಾಟೀಲ್ ಇವರು ನವಲೂರಿನ ಸರ್ಕಾರಿ ಪ್ರೌಢಶಾಲೆ ಹಾಗೂ ಹಿರಿಯ ಪ್ರಾಥಮಿಕ ಶಾಲೆಗೆ ಭೇಟಿ ನೀಡಿ ಮಕ್ಕಳಿಗೆ ನೀಡುವ ಪಿಎಂ ಪೋಷನ ಅಭಿಯಾನದ ಉಪಹಾರ ನೀಡುವಿಕೆಯನ್ನು ಪರಿಶೀಲಿಸಿ, ಪ್ರತಿ ವರ್ಗದ ಮಗು ಎಷ್ಟು ಗ್ರಾಮ ಉಪಹಾರ ಸೇವಿಸುತ್ತದೆ ಎಂಬುದನ್ನು ವೇಯಿಂಗ್ ಮಷೀನ್ ಮೂಲಕ ಪರಿಶೀಲಿಸಿ ದಾಖಲಿಸಿದರು.

# ವಿದ್ಯುತ್ ವಿತರಣೆ ಹಸ್ತಾಂತರ ವಿರೋಧಿಸಿ ಮನವಿ



**ಬೆಳಗಾವಿ ವಾರ್ತೆ ನವಲಗುಂದ:** "ಟಾಟಾ ಪವರ್ ಕಂಪೆನಿ ಲಿಮಿಟೆಡ್' ಖಾಸಗಿ ಕಂಪೆನಿಗೆ ಕರ್ನಾಟಕ ರಾಜ್ಯದಲ್ಲಿ ವಿದ್ಯುತ್ ವಿತರಣಾ ಹಸ್ತಾಂತರಿಸಲು ಪ್ರಯತ್ನ ನಡೆಯುತ್ತಿದ್ದನ್ನು ವಿರೋಧಿಸಿ ನವಲಗುಂದ ಹೆಸ್ಕಾಂ ನೌಕರರ ಸಂಘ ಶಾಸಕ ಎನ್ ಎಚ್ ಕೋನರಡ್ಡಿ ಅವರಿಗೆ ಮನವಿ ಸಲ್ಲಿಸಿದರು.

ಇಂಧನ ಇಲಾಖೆಯನ್ನು ಖಾಸಗೀಕರಣ ಮಾಡುತ್ತಿರುವುದರಿಂದ ಮುಂದಿನ ದಿನದಲ್ಲಿ ಪ್ರತಿಯೊಬ್ಬರಿಗೂ ತೊಂದರೆಯಾಗಲಿದೆ. ಒಕ್ಕೂಟವು ರಾಜ್ಯದ ಎಲ್ಲ ?? ವರ್ಗದ ಗ್ರಾಹಕರ ಮತ್ತು ಕಂಪನಿಗಳ ಹಿತ ಕಾಯಲು ಬದ್ಧವಾಗಿದೆ.

ರಾಜ್ಯದಲ್ಲಿ ಅದ್ಭುತ ತಾಂತ್ರಿಕ ಸಾಮರ್ಥ್ಯ, ಮೂಲಸೌಕರ್ಯ ಮತ್ತು ಸುಗಮ ಆಡಳಿತ ನಿರ್ವಹಣೆ ಇರುವಾಗ ರಾಜ್ಯದ ವಿದ್ಯುತ್ ವಿತರಣಾ ಜಾಲವನ್ನು ಹೊರ ರಾಜ್ಯದ ಖಾಸಗಿ ಸಂಸ್ಥೆಗೆ ಹಸ್ತಾಂತರಿಸಲು ಬಿಡುವುದಿಲ್ಲ. ವಿದ್ಯುತ್ ವಿತರಣಾ ಜಾಲದ ಖಾಸಗೀಕರಣ ನಿರ್ಧಾರ ಕೈಬಿಟ್ಟು ಟಾಟಾ ಪವರ್ ಸಂಸ್ಥೆಯ ಅರ್ಜಿಯನ್ನು ತಿರಸ್ಕರಿಸಬೇಕು. ಕೆಪಿಟಿಸಿಎಲ್ ಹಾಗೂ ಐದು ಎಸ್ಕಾಂಗಳ ವ್ಯಾಪ್ತಿಯಲ್ಲಿ ವಿದ್ಯುತ್ ವಿತರಣೆಗೆ ಟಾಟಾ ಪವರ್ ಕಂಪನಿ ಪರವಾನಗಿ ಪಡೆಯುತ್ತಿರುವುದು ವಿದ್ಯುತ್ ಕ್ಷೇತ್ರವನ್ನು ಖಾಸಗೀಕರಣಗೊಳಿಸುವ ವ್ಯವಸ್ಥಿತ ಸಂಚು. ಹೀಗಾಗಿ ಪರವಾನಗಿ ನೀಡುವುದಕ್ಕೆ ಆಕ್ಷೇಪಣೆ ಸಲ್ಲಿಸಬೇಕು ಒಂದು ವೇಳೆ ಸರ್ಕಾರವು ಈ ಖಾಸಗೀಕರಣದ ನಿರ್ಧಾರದಿಂದ ಹಿಂದೆ ಸರಿಯಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ.

ರಾಜ್ಯದ ಗ್ರಾಹಕ ವರ್ಗದ ಹಿತದೃಷ್ಟಿಯಿಂದ ಹಾಗೂ ನವಲಗುಂದ ನೌಕರರ ಹಿತದೃಷ್ಟಿಯಿಂದ ಮಾನ್ಯ ಮುಖ್ಯಮಂತ್ರಿಗಳ ಗಮನಕ್ಕೆ ತರಲಾಗುವುದು ಎಂದು ಶಾಸಕ ಎನ್ ಎಚ್ ಕೋನರಡ್ಡಿ ಭರವಸೆ ನೀಡಿದರು.

ಸಂಘದ ಕಾರ್ಯದರ್ಶಿ ಚಂದ್ರಶೇಖರ ಬಾವಿಕಟ್ಟಿ, ಹಣಮರಡ್ಡಿ ರೋಗಿ, ಎಸ್ ಎಸ್ ಬೆಟಗೇರಿ, ಆರ್ ಕೆ ಪಾಟೀಲ್, ಬಿ ಎನ್ ನಾಯ್ಕರ್, ಎಸ್ ಡಿ ನಡುವಿನಮನಿ, ಬಿ ಎ ಸಿದ್ದನಗೌಡ, ಸಿದ್ದಪ್ಪ ಲಕ್ಕುಂಡಿ, ಜಿ ಎಸ್ ಬಸಾಪುರ, ಎ ಜಿ ನಾಗನೂರ್, ವಿ ವಾಯ್ ಆನಂದಿ, ಅರ್ಜುನ ಕೊಣ್ಣೂರ್ ಸೇರಿ ಹೆಸ್ಕಾಂ ನೌಕರರ ಸಂಘದ ಎಲ್ಲ ಸದಸ್ಯರು ಇದ್ದರು.

# ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ

**ಬೆಳಗಾವಿ ವಾರ್ತೆ ಗದಗ:** 2026–27 ನೇ ಸಾಲಿನಲ್ಲಿ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ–1 ರ ಅಲೆಮಾರಿ/ಅರೆಅಲೆಮಾರಿ ಜನಾಂಗದ ವಿದ್ಯಾರ್ಥಿಗಳಿಂದ, ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ , ಅಲೆಮಾರಿ/ಅರೆಅಲೆಮಾರಿ ಜನಾಂಗದ ಮೆಟ್ರಿಕ್ ನಂತರದ ಅರ್ಹತಾ ವಿದ್ಯಾರ್ಥಿವೇತನ, ಶುಲ್ಕ ವಿನಾಯಿತಿ, ವಿದ್ಯಾಸಿರಿ–ಊಟ ಮತ್ತು ವಸತಿ ಸಹಾಯ ಯೋಜನೆ ಸೌಲಭ್ಯಕ್ಕಾಗಿ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಆಗಸ್ಟ್ 31 ಕೊನೆಯ ದಿನವಾಗಿದೆ. https://ssp.postmatric.karnataka.gov.in ವೆಬ್‌ಸೈಟ್ ಮೂಲಕ ಆನ್‌ಲೈನ್ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಗದಗ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಕಚೇರಿಯನ್ನು ಸಂಪರ್ಕಿಸಬೇಕೆಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ಮಹೆಬೂಬ ತುಂಬರಮಟ್ಟಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜನನ–ಮರಣ ನೋಂದಣೆಯಲ್ಲಿ ವಿಳಂಬ ಸಹಿಸಲಾಗದು: ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಕಟ್ಟುನಿಟ್ಟಿನ ಸೂಚನೆ



**ಬೆಳಗಾವಿ ವಾರ್ತೆ ಗದಗ:** ಜನನ ಮತ್ತು ಮರಣ ನೋಂದಣಿ ಪ್ರಕ್ರಿಯೆಯನ್ನು ಸಮಯೋಚಿತವಾಗಿ ಹಾಗೂ ದೋಷರಹಿತವಾಗಿ ನಡೆಸುವುದು ಅತ್ಯಂತ ಮಹತ್ವದ್ದಾಗಿದ್ದು, ಯಾವುದೇ ಕಾರಣಕ್ಕೂ ವಿಳಂಬ ನೋಂದಣಿಗೆ ಅವಕಾಶ ನೀಡಬಾರದು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧ'ರ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ಜಿಲ್ಲಾಡಳಿತ ಭವನದಲ್ಲಿ ಬುಧವಾರ ನಡೆದ ಜನನ–ಮರಣ ನೋಂದಣಿ ಪದ್ಧತಿಯ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಪ್ರಗತಿ ಪರಿಶೀಲನೆ ನಡೆಸಿದರು.

ಸಭೆಯಲ್ಲಿ ಮಾತನಾಡಿದ ಜಿಲ್ಲಾಧಿಕಾರಿಗಳು, ಜಿಲ್ಲೆಯ ಎಲ್ಲ ಸರ್ಕಾರಿ ಆಸ್ಪತ್ರೆಗಳ ಜನನ–ಮರಣ ನೋಂದಣಿ ವೈದ್ಯಾಧಿಕಾರಿಗಳು ಕಡ್ಡಾಯವಾಗಿ ಡಿಜಿಟಲ್ ಕೀ (ಆರುಣಚಿಟ ಏಜಥಿ) ಹೊಂದಿರಬೇಕು. ಈ ವಿಷಯದಲ್ಲಿ ಯಾವುದೇ ವಿನಾಯಿತಿ ಅಥವಾ ಕಾರಣಗಳನ್ನು ಒಪ್ಪಲಾಗುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ಜನನ ಮತ್ತು ಮರಣ ನೋಂದಣಿ ಸರಿಯಾದ ಸಂದರ್ಭದಲ್ಲಿ ಹಾಗೂ ನಿಗದಿತ ಅವಧಿಯೊಳಗೆ ನಡೆಯುವಂತೆ ಅಗತ್ಯ ಪೂರ್ವಸಿದ್ಧತೆಗಳನ್ನು ಮಾಡಿಕೊಳ್ಳಬೇಕು. ನೋಂದಣಿ ಪ್ರಕ್ರಿಯೆಯಲ್ಲಿ ಎದುರಾಗುತ್ತಿರುವ ಅಡೆತಡೆಗಳನ್ನು ಸಭೆಯ ಗಮನಕ್ಕೆ ತಂದು ಅವುಗಳಿಗೆ ಶೀಘ್ರ ಪರಿಹಾರ ಕಂಡುಕೊಳ್ಳುವ ಮೂಲಕ ಪ್ರಗತಿ ಸಾಧಿಸಬೇಕು ಎಂದು ಸೂಚಿಸಿದರು.

ನೋಂದಣಿ ಕಾರ್ಯದಲ್ಲಿ ನಿರೀಕ್ಷಿತ ಪ್ರಗತಿ ಕಾಣದಿದ್ದರೆ ಅದಕ್ಕೆ ಸಂಬಂಧಿಸಿದ ಅಧಿಕಾರಿಗಳೇ ಹೊಣೆಗಾರರಾಗಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದ ಜಿಲ್ಲಾಧಿಕಾರಿಗಳು, ಜನನ ಮತ್ತು ಮರಣ ನೋಂದಣಿಯು ಮುಂದಿನ ದಿನಗಳಲ್ಲಿ ನಾಗರಿಕರಿಗೆ ಅಗತ್ಯವಾಗುವ ವಿವಿಧ ದಾಖಲೆಗಳು, ಸರ್ಕಾರಿ ಸೌಲಭ್ಯಗಳು ಹಾಗೂ ಕಾನೂನು ಪ್ರಕ್ರಿಯೆಗಳಿಗೆ ಮೂಲ ಆಧಾರವಾಗಿರುವುದರಿಂದ ಈ ಕಾರ್ಯದಲ್ಲಿ ನಿರ್ಲಕ್ಷ್ಯಕ್ಕೆ ಅವಕಾಶವಿಲ್ಲ ಎಂದು ಜಿಲ್ಲಾಧಿಕಾರಿ ಸಿ ಎನ್ ಶ್ರೀಧ'ರ ಪುನರುಚ್ಚರಿಸಿದರು.

ಸಭೆಯಲ್ಲಿ ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ ಬಿ ಎಸ್ ಪಾಟೀಲ ಮಾಹಿತಿ ನೀಡಿ, ಜಿಲ್ಲೆಯಲ್ಲಿನ 2 ಆಸ್ಪತ್ರೆಗಳು ನಿಗದಿತ ಅವಧಿಯೊಳಗೆ ಜನನ–ಮರಣ ನೋಂದಣಿ ಕಾರ್ಯವನ್ನು ಸಮರ್ಪಕವಾಗಿ ನಿರ್ವಹಿಸಿ ಉತ್ತಮ ಸಾಧನೆ ತೋರಿವೆ ಎಂದು ತಿಳಿಸಿದರು. ಇತರೆ ಆಸ್ಪತ್ರೆಗಳೂ ಇದೇ ಮಾದರಿಯನ್ನು ಅನುಸರಿಸಿ ಕಾರ್ಯಕ್ಷಮತೆಯನ್ನು ಹೆಚ್ಚಿಸಿಕೊಳ್ಳಬೇಕು ಎಂದು ಹೇಳಿದರು.

ಜನವರಿ ಯಿಂದ ಮೇ 2026ರ ಅಂತ್ಯದ ಅಂಕಿಅಂಶಗಳ ಪ್ರಕಾರ ಜಿಲ್ಲೆಯಲ್ಲಿ ಒಟ್ಟು 6,994 ಜನನ ಪ್ರಕರಣಗಳು ದಾಖಲಾಗಿದ್ದು, ಅವುಗಳಲ್ಲಿ 5,090 (72.78%) ಪ್ರಕರಣಗಳು ನಿಗದಿತ ಅವಧಿಯೊಳಗೆ ನೋಂದಣಿಯಾಗಿವೆ. ತಾಲೂಕುವಾರು ಪರಿಶೀಲನೆಯಲ್ಲಿ ಗದಗ ತಾಲೂಕು 76.43% ಹಾಗೂ ಮುಂಡರಗಿ ತಾಲೂಕು 76.56% ಸಮಯೋಚಿತ ನೋಂದಣಿಯೊಂದಿಗೆ ಉತ್ತಮ ಸಾಧನೆ ಮಾಡಿವೆ. ಶಿರಹಟ್ಟಿ ತಾಲೂಕು 73.68%, ಲಕ್ಷ್ಮೇಶ್ವರ 75.79% ಮತ್ತು ನರಗುಂದ 73.56% ಪ್ರಗತಿ ದಾಖಲಿಸಿವೆ. ರೋಣ ತಾಲೂಕು 47.11% ಸಾಧನೆಯೊಂದಿಗೆ ಹಿಂದುಳಿದಿದೆ ಎಂದು ಮಾಹಿತಿ ನೀಡಿದರು.

ಜಿಲ್ಲೆಯಲ್ಲಿ ಒಟ್ಟು 3,872 ಮರಣ ಪ್ರಕರಣಗಳು ದಾಖಲಾಗಿದ್ದು, ಅವುಗಳಲ್ಲಿ 2,830 (73.09%) ಪ್ರಕರಣಗಳು ನಿಗದಿತ ಅವಧಿಯೊಳಗೆ ನೋಂದಣಿಯಾಗಿವೆ. ತಾಲೂಕುವಾರು ಪರಿಶೀಲನೆಯಲ್ಲಿ ಗದಗ ತಾಲೂಕು 71.68% ಹಾಗೂ ಮುಂಡರಗಿ ತಾಲೂಕು 73.77%, ಶಿರಹಟ್ಟಿ ತಾಲೂಕು 79.51%, ಲಕ್ಷ್ಮೇಶ್ವರ 68.47% ಮತ್ತು ನರಗುಂದ 73.63%, ರೋಣ ತಾಲೂಕು 69.91% ಪ್ರಗತಿ ಸಾಧನೆ ಮಾಡಿವೆ.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್., ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಎ.ಎ. ಕಂಬಾಳಿಮಠ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೊಟೂರ, ಭೂದಾಖಲೆಗಳ ಉಪನಿರ್ದೇಶಕ ರುದ್ರಣ್ಣಗೌಡ ಜಿ.ಜೆ., ವಾರ್ತಾಧಿಕಾರಿ ವಸಂತ ಮಡ್ಲೂರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ರಾಧಾ ಮಣ್ಣೂರ, ಆನಂದ ಬದಿ ಸೇರಿದಂತೆ ವಿವಿಧ' ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

> "ಜನನ ಮತ್ತು ಮರಣ ನೋಂದಣಿ ಪ್ರಕ್ರಿಯೆಯನ್ನು ಸಮಯೋಚಿತವಾಗಿ ಹಾಗೂ ದೋಷರಹಿತವಾಗಿ ನಡೆಸುವುದು ಅತ್ಯಂತ ಮಹತ್ವದ್ದಾಗಿದೆ. ಯಾವುದೇ ಕಾರಣಕ್ಕೂ ವಿಳಂಬ ನೋಂದಣಿಗೆ ಅವಕಾಶ ನೀಡಬಾರದು. ಎಲ್ಲಾ ಸರ್ಕಾರಿ ಆಸ್ಪತ್ರೆಗಳ ನೋಂದಣಿ ವೈದ್ಯಾಧಿಕಾರಿಗಳು ಕಡ್ಡಾಯವಾಗಿ ಡಿಜಿಟಲ್ ಕೀ ಹೊಂದಿರಬೇಕು. ನೋಂದಣಿ ಕಾರ್ಯದಲ್ಲಿ ನಿರೀಕ್ಷಿತ ಪ್ರಗತಿ ಕಾಣದಿದ್ದರೆ ಸಂಬಂಧಿಸಿದ ಅಧಿಕಾರಿಗಳೇ ಹೊಣೆಗಾರರಾಗುತ್ತಾರೆ."
>
> **ಸಿ.ಎನ್. ಶ್ರೀಧರ, ಜಿಲ್ಲಾಧಿಕಾರಿ, ಗದಗ**

## ಅಂಗನವಾಡಿ ಕಾರ್ಯಕರ್ತೆ, ಸಹಾಯಕಿ ಹುದ್ದೆಗೆ ಅರ್ಜಿ

**ಬೆಳಗಾವಿ ವಾರ್ತೆ ಬಾಗಲಕೋಟೆ:** ಜಿಲ್ಲೆಯ ಬಾಗಲಕೋಟೆ, ಬೀಳಗಿ, ಬಾದಾಮಿ, ಹುನಗುಂದ, ಜಮಖಂಡಿ ಹಾಗೂ ಮುಧೋಳ ತಾಲೂಕಾ ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯಲ್ಲಿನ ವಿವಿಧ ಗ್ರಾಮ ಪಂಚಾಯತಿ, ಪುರಸಭೆ, ಪಟ್ಟಣ ಪಂಚಾಯತಿಗಳಲ್ಲಿ ಖಾಲಿ ಇರುವ 44 ಅಂಗನವಾಡಿ ಕಾರ್ಯಕರ್ತೆ ಹಾಗೂ 306 ಅಂಗನವಾಡಿ ಸಹಾಯಕಿಯರ ಗೌರವ ಸೇವೆ ಹುದ್ದೆಗಳಿಗೆ ಆಫ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ 19 ರಿಂದ 35 ವರ್ಷದ ಒಳಗಿನ ಮಹಿಳಾ ಅಭ್ಯರ್ಥಿಗಳು ಜುಲೈ 17 ರಂದು ಸಂಜೆ 5.30 ಗಂಟೆಯೊಳಗಾಗಿ ಅರ್ಜಿ ಸಲ್ಲಿಸಬೇಕು. ಬಾಗಲಕೋಟೆ ತಾಲೂಕಿನಲ್ಲಿ ಅಂಗನವಾಡಿ ಕಾರ್ಯಕರ್ತೆಯರ ಹುದ್ದೆ 9, ಸಹಾಯಕಿ 47, ಬೀಳಗಿ 3 ಕಾರ್ಯಕರ್ತೆ, 32 ಸಹಾಯಕಿಯರು, ಹುನಗುಂದ 13 ಕಾರ್ಯಕರ್ತೆ, 51 ಸಹಾಯಕರಿಯರು, ಬಾದಾಮಿ 9 ಕಾರ್ಯಕರ್ತೆ 65 ಸಹಾಯಕಿಯರು, ಜಮಖಂಡಿ 4 ಕಾರ್ಯಕರ್ತೆ 68 ಸಹಾಯಕಿಯರು ಹಾಗೂ ಮುಧೋಳ ತಾಲೂಕಿನಲ್ಲಿ 6 ಕಾರ್ಯಕರ್ತೆಯರು, 43 ಸಹಾಯಕರ ಹುದ್ದೆಗಳು ಖಾಲಿ ಇರುತ್ತವೆ. ಹೆಚ್ಚಿನ ಮಾಹಿತಿಗಾಗಿ ಆಯಾ ತಾಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಾರ್ಯಾಲಯ ಹಾಗೂ ಉಪನಿರ್ದೇಶಕ ಕಚೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬಾಗಲಕೋಟೆ ಇವರನ್ನು ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದೆ.

# ಮಳೆ ನೀರು ಸರಾಗವಾಗಿ ಹರಿಯುವಂತೆ ನೋಡಿಕೊಳ್ಳಿ: ಪಾಲಿಕೆ ಅಧಿಕಾರಿಗಳಿಗೆ ಮೇಯರ್ ಕರಡಿ ಸೂಚನೆ



**ಬೆಳಗಾವಿ ವಾರ್ತೆ ವಿಜಯಪುರ:** ನಗರದಲ್ಲಿ ಮಳೆಯಿಂದ ಸಂಗ್ರಹವಾಗುವ ಮಳೆ ನೀರನ್ನು ಸರಾಗವಾಗಿ ಹರಿದು ಹೋಗಲು ಕೋಟೆ ಗೋಡೆ ಸುತ್ತಲಿನ ಕಂದಕಗಳು ಹಾಗೂ ರಾಜ ಕಾಲುವೆಗಳಲ್ಲಿ ಸಂಗ್ರಹಣೆಯಾಗಿರುವ ಮಣ್ಣು ಹಾಗೂ ಹೂಳನ್ನು ತೆಗೆಯುವ ಪ್ರಕ್ರಿಯೆಯನ್ನು ಪ್ರಾರಂಭಿಸಬೇಕು ಎಂದು ಮಹಾನಗರ ಪಾಲಿಕೆ ಮೇಯರ್ ಎಂ.ಎಸ್.ಕರಡಿ ಅವರು ಅಧಿಕಾರಿಗಳಿಗೆ ಸೂಚಿಸಿದರು.

ನಗರದ ಪಾಲಿಕೆಯ ಸಭಾಭವನದಲ್ಲಿ ಮೇಯರ್ ಅವರ ಅಧ್ಯಕ್ಷತೆಯಲ್ಲಿ ಮಂಗಳವಾರ ನಡೆದ ಪ್ರವಾಹ ಎದುರಾದಲ್ಲಿ ಸಮರ್ಥವಾಗಿ ಎದುರಿಸುವ, ಬೀದಿ ದೀಪ, ಸ್ವಚ್ಛತೆ, ನೀರು ಪೂರೈಕೆ ಕುರಿತಾಗಿ ಪಾಲಿಕೆ ಸದಸ್ಯರು ಹಾಗೂ ಅಧಿಕಾರಿಗಳೊಂದಿಗೆ ನಡೆದ ಸಭೆಯಲ್ಲಿ ಈ ಸೂಚನೆ ನೀಡಿದರು.

ನಗರದಲ್ಲಿರುವ ಅಪಾಯಕಾರಿ ಮರ ಮತ್ತು ಅನೇಕ ಮರಗಳ ಟೊಂಗೆಗಳು ವಿದ್ಯುತ್ ತಂತಿಗೆ ತಗುಲಿ ವಿದ್ಯುತ್ ಸಂಪರ್ಕ ಹಾಗೂ ಯಾವುದೇ ಹಾನಿಯಾಗದಂತೆ ಮುಂಚಿತವಾಗಿ ಯೋಜನೆ ರೂಪಿಸಿಕೊಳ್ಳಬೇಕು. ಮಳೆಗಾಲದಲ್ಲಿ ಮುಂಜಾಗ್ರತೆಯಾಗಿ ಅಪಾಯಕಾರಿ ಮರಗಳನ್ನು ತೆರವುಗೊಳಿಸುವಂತೆ ಅರಣ್ಯ ಇಲಾಖೆಯ ಅಧಿಕಾರಿಗಳಿಗೆ ಹಾಗೂ ಮಳೆಗಾಲದ ಸನ್ನಿವೇಶದಲ್ಲಿ ತುರ್ತು ಪರಿಹಾರ ಕಾರ್ಯಗಳನ್ನು ಕೈಗೊಳ್ಳುವ ಪಾಲಿಕೆಯ ಎಲ್ಲ ಅಧಿಕಾರಿ, ಸಿಬ್ಬಂದಿ ಕಡ್ಡಾಯವಾಗಿ ಸುರಕ್ಷತಾ ಪರಿಕರಗಳನ್ನು ಧರಿಸಿ ಕಾರ್ಯ ನಿರ್ವಹಿಸಬೇಕು ಎಂದರು.

ಪಾಲಿಕೆಯ ಸದಸ್ಯರು ಮಾತನಾಡಿ, ಮಳೆಗಾಲದ ಸಂದರ್ಭದಲ್ಲಿ ಮಳೆಯಿಂದ ತಗ್ಗು ಪ್ರದೇಶಗಳಲ್ಲಿನ ಮನೆಗಳಿಗೆ ನೀರು ನುಗ್ಗಿ ಜನ ಜೀವನಕ್ಕೆ ತೊಂದರೆ ಉಂಟಾಗದಂತೆ ಹಾಗೂ ರಸ್ತೆಗಳು ಜಲಾವೃತಗೊಂಡು ಸಂಚಾರಕ್ಕೆ ಅನಾನುಕೂಲವಾಗದ ನಿಟ್ಟಿನಲ್ಲಿ ಈ ಕುರಿತು ಮುಂಜಾಗೃತ ಕ್ರಮವಾಗಿ ಅವಶ್ಯಕ ಕಾಮಗಾರಿಗಳನ್ನು ಕೈಗೊಂಡು ಪ್ರವಾಹ ಪರಿಸ್ಥಿತಿಯಾಗದಂತೆ ಪರಿಹಾರ ಕ್ರಮ ತೆಗೆದುಕೊಳ್ಳಬೇಕೆಂದು ತಿಳಿಸಿದರು. ಅಪಾಯಕಾರಿ ರೀತಿಯಲ್ಲಿ ಇರುವ ವಿದ್ಯುತ್ ಕಂಬಗಳನ್ನು ಈ ಕೂಡಲೇ ಸ್ಥಳಾಂತರ ಮಾಡುವಂತೆ ಹಾಗೂ ಹೊಸದಾಗಿ ವಿದ್ಯುತ್ ಕಂಬಗಳನ್ನು ಸ್ಥಾಪಿಸಿ ಸಾರ್ವಜನಿಕರಿಗೆ ಹಾಗೂ ಜಾನುವಾರುಗಳ ಜೀವಕ್ಕೆ ಹಾನಿಯಾಗದಂತೆ ಕೂಡಲೆ ಕ್ರಮ ವಹಿಸುವಂತೆ ಹೆಸ್ಕಾಂ ಇಲಾಖೆಯ ಅಧಿಕಾರಿಗಳಿಗೆ ತಿಳಿಸಿದರು.

ನಗರದಲ್ಲಿ ಯು.ಜಿ.ಡಿ ಚೇಂಬರ್‌ಗಳನ್ನು ಈ ಕೂಡಲೇ ಮುಂಜಾಗ್ರತವಾಗಿ ಎಲ್ಲ ಒಳಚರಂಡಿಗಳನ್ನು ಸ್ವಚ್ಛಗೊಳಿಸಿ ಯಾವುದೇ ತ್ಯಾಜ್ಯ ಚರಂಡಿಯಲ್ಲಿ ಬ್ಲಾಕ್ ಆಗದಂತೆ ಕ್ರಮ ವಹಿಸುವಂತೆ ಸದಸ್ಯರು ಪಾಲಿಕೆಯ ಆರೋಗ್ಯ ಶಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ನಗರದಲ್ಲಿ ಪ್ರಸ್ತುತ ಕುಡಿಯುವ ನೀರು ಸರಬರಾಜು ಪ್ರಕ್ರಿಯೆಯಲ್ಲಿ ಸಮರ್ಪಕವಾಗಿ ನೀರು ಸರಬರಾಜು ಮಾಡಲು ಕ್ರಮ ವಹಿಸುವಂತೆ, ಈ ವಿಷಯಗಳ ಬಗ್ಗೆ, ಆದ್ಯತೆ ಮೇರೆಗೆ ಸಮಸ್ಯೆ ಪರಿಹರಿಸುವಂತೆ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ಅಧಿಕಾರಿಗಳಿಗೆ ತಿಳಿಸಿದರು.

ಮಹಾನಗರಪಾಲಿಕೆಯ ವಿವಿಧ ವಾರ್ಡ್ ಗಳಲ್ಲಿ ಮುಖ್ಯ ರಸ್ತೆ ಮತ್ತು ಇತರೆ ಆಂತರಿಕ ರಸ್ತೆ ದುರಸ್ತಿಗೆ ಪಾಲಿಕೆಯ ಲೋಕೋಪಯೋಗಿ ಶಾಖೆಯ ಅಧಿಕಾರಿಗಳು ಮಳೆಗಾಲದ ಪೂರ್ವದಲ್ಲಿ ಮುಂಜಾಗೃತವಾಗಿ ರಸ್ತೆಗಳನ್ನು ನಿರ್ಮಿಸುವಂತೆ ತಿಳಿಸಲಾಯಿತು.

ಸಭೆಯಲ್ಲಿ ಮಹಾನಗರಪಾಲಿಕೆಯ ಚುನಾಯಿತ ಹಾಗೂ ನಾಮ ನಿರ್ದೇಶಿತ ಸದಸ್ಯರು, ಮಹಾನಗರ ಪಾಲಿಕೆಯ ವಿವಿಧ ಶಾಖೆಯ ಅಧಿಕಾರಿಗಳು, ಜಲ ಮಂಡಳಿ ಅಧಿಕಾರಿಗಳು, ಹೆಸ್ಕಾಂ ಹಾಗೂ ಅರಣ್ಯ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಭೂ ಸಂತ್ರಸ್ತರ ಹೋರಾಟ ತೀವ್ರ: ಜೂನ್ 18ಕ್ಕೆ ಸ್ವಯಂಪ್ರೇರಿತ ಬಳ್ಳಾರಿ ಜಿಲ್ಲಾ ಬಂದ್



**ಬೆಳಗಾವಿ ವಾರ್ತೆ ಬಳ್ಳಾರಿ:** ಭೂಸ್ವಾಧೀನದಿಂದ ಸಂತ್ರಸ್ತರಾಗಿರುವ ರೈತರಿಗೆ ನ್ಯಾಯಯುತ ಪರಿಹಾರ ನೀಡಬೇಕು ಹಾಗೂ ಉದ್ದೇಶಿತ ಕೈಗಾರಿಕೆಗಳನ್ನು ತಕ್ಷಣ ಸ್ಥಾಪಿಸಬೇಕು ಎಂಬ ಆಗ್ರಹದೊಂದಿಗೆ ಭೂ ಸಂತ್ರಸ್ತ ಹೋರಾಟ ಸಮಿತಿ ಹಾಗೂ ವಿವಿಧ ರೈತ, ಕಾರ್ಮಿಕ ಮತ್ತು ಕನ್ನಡಪರ ಸಂಘಟನೆಗಳು ಜೂನ್ 18ರಂದು ಬಳ್ಳಾರಿ ಜಿಲ್ಲಾ ಸಂಪೂರ್ಣ ಬಂದ್‌ಗೆ ಕರೆ ನೀಡಿವೆ.

2010ರಲ್ಲಿ ಕುಡಿತಿನಿ, ಹರಗಿನಡೋಣಿ, ಜಾನೇಕುಂಟ, ವೇಣಿವೀರಾಪುರ, ಕೊಳಗಲ್ಲು, ಸಿದ್ದಮ್ಮನಹಳ್ಳಿ ಹಾಗೂ ಯರಂಗಳಿ ಗ್ರಾಮಗಳ ರೈತರಿಂದ ಸುಮಾರು 12,875 ಎಕರೆ ಭೂಮಿಯನ್ನು ಕೆಐಎಡಿಬಿ ಮೂಲಕ ಕೈಗಾರಿಕೆಗಳ ಸ್ಥಾಪನೆಗಾಗಿ ಸ್ವಾಧೀನಪಡಿಸಿಕೊಳ್ಳಲಾಗಿತ್ತು. ಆದರೆ ರೈತರಿಗೆ ಸಮರ್ಪಕ ಪರಿಹಾರ ದೊರಕಿಲ್ಲ ಹಾಗೂ ಕೈಗಾರಿಕೆಗಳ ಸ್ಥಾಪನೆಯೂ ಆಗಿಲ್ಲ ಎಂದು ಹೋರಾಟಗಾರರು ಆರೋಪಿಸಿದ್ದಾರೆ.

ಕೈಗಾರಿಕೆಗಳ ಸ್ಥಾಪನೆಯಿಂದ ಸ್ಥಳೀಯರಿಗೆ ಉದ್ಯೋಗ ಸಿಗಲಿದೆ ಎಂಬ ನಿರೀಕ್ಷೆ ಈಡೇರದೇ ಉಳಿದಿದ್ದು, ಹಲವು ವರ್ಷಗಳಿಂದ ರೈತರು ನ್ಯಾಯಕ್ಕಾಗಿ ಹೋರಾಟ ನಡೆಸುತ್ತಿದ್ದಾರೆ. ಈ ಸಂಬಂಧ ನ್ಯಾಯಾಲಯಗಳು ರೈತರ ಪರವಾಗಿ ತೀರ್ಪು ನೀಡಿದ್ದರೂ ಎಲ್ಲ ರೈತರಿಗೆ ಸಮರ್ಪಕ ಪರಿಹಾರ ದೊರೆತಿಲ್ಲ ಎಂದು ಸಂಘಟನೆಗಳು ಅಸಮಾಧಾನ ವ್ಯಕ್ತಪಡಿಸಿವೆ.

ಕಳೆದ ಮೂರು ವರ್ಷಗಳಿಂದ ವಿವಿಧ ರೀತಿಯ ಪ್ರತಿಭಟನೆಗಳು ನಡೆಯುತ್ತಿದ್ದರೂ ಸರ್ಕಾರದಿಂದ ಶಾಶ್ವತ ಪರಿಹಾರ ಸಿಗದ ಹಿನ್ನೆಲೆಯಲ್ಲಿ ಜೂನ್ 18ರಂದು ಬೆಳಿಗ್ಗೆ 6ರಿಂದ ಸಂಜೆ 6ರವರೆಗೆ ಬಳ್ಳಾರಿ ಹಾಗೂ ವಿಜಯನಗರ ಜಿಲ್ಲೆಯಲ್ಲಿ ಸ್ವಯಂಪ್ರೇರಿತ ಬಂದ್ ನಡೆಸಲು ತೀರ್ಮಾನಿಸಲಾಗಿದೆ.

ಭೂ ಸಂತ್ರಸ್ತ ಹೋರಾಟ ಸಮಿತಿ, ಸಿಐಟಿಯು, ಕರ್ನಾಟಕ ಪ್ರಾಂತ ರೈತ ಸಂಘ ಸೇರಿದಂತೆ 20ಕ್ಕೂ ಹೆಚ್ಚು ರೈತ, ಕಾರ್ಮಿಕ, ವಿದ್ಯಾರ್ಥಿ, ಮಹಿಳಾ ಹಾಗೂ ಸಾಮಾಜಿಕ ಸಂಘಟನೆಗಳು ಬಂದ್‌ಗೆ ಬೆಂಬಲ ವ್ಯಕ್ತಪಡಿಸಿವೆ. ಬಂದ್‌ಗೆ ಮುನ್ನ ಜೂನ್ 17ರ ಸಂಜೆ ಬಳ್ಳಾರಿ ನಗರದ ಪ್ರಮುಖ ಬೀದಿಗಳಲ್ಲಿ ಪಂಜಿನ ಮೆರವಣಿಗೆ ನಡೆಸಿ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲಾಗುವುದು ಎಂದು ಸಂಘಟನೆಗಳ ಮುಖಂಡರು ತಿಳಿಸಿದ್ದಾರೆ.

# ಎಂಪಿ ತುಕಾರಾಂ ವಿರುದ್ಧ ಬಳ್ಳಾರಿಯಲ್ಲಿ ಬಿಜೆಪಿ ಪ್ರತಿಭಟನೆ



**ಬೆಳಗಾವಿ ವಾರ್ತೆ ಬಳ್ಳಾರಿ:** ಲೋಕಸಭಾ ಸದಸ್ಯ ಈ. ತುಕಾರಾಂ ವಿರುದ್ಧ ಜಿಲ್ಲೆಯ ಬಿಜೆಪಿ ನಾಯಕರು ಸಿಡಿದೆದ್ದು ನಗರದ ಗಡಗಿ ಚೆನ್ನಪ್ಪ ವೃತ್ತದಲ್ಲಿ ಇಂದು ಮಾನವ ಸರಪಳಿ ರಚಿಸಿ ತುಕಾರಾಂ ಅವರ ಪ್ರತಿಕೃತಿ ಧಹಿಸಿ ಅಕ್ರೋಶ ವ್ಯಕ್ತಪಡಿಸದರು.

ರಾಷ್ಟ್ರೀಯ ಹೆದ್ದಾರಿಯ ಕಾಮಗಾರಿ ಕಳಪೆ ಆಗಿದೆಂದು ಡಣಾಪುರ ಬಳಿ ವ್ಯಕ್ತಿಯೋರ್ವ ವೀಡಿಯೋ ಮಾಡಿ ಪ್ರಶ್ನೆ ಮಾಡಿದ್ದಕ್ಕಾಗಿ ಆತನಿಗೆ ಅಶ್ಲೀಲ ಪದ ಬಳಕೆ ಮಾಡಿ ಬೈದೊರುವುದನ್ನು ಖಂಡಿಸಿ ಈ ಪ್ರತಿಭಟನೆ ನಡೆಸಲಾಯ್ತು.

ಕಳಪೆ ಕಾಮಗಾರಿ ಬಗ್ಗೆ ಪ್ರಶ್ನೆ ಮಾಡಿ ವೀಡಿಯೋ ಮಾಡಿದ್ದ ಯುವಕನ ಬಗ್ಗೆ ಕಳ್ಳಮುಂಡೆ ಮಕ್ಕಳು ಏನೇನೂ ಮಾಡ್ತಾರೆ, ಎಚ್ಚರಿಕೆಯಿಂದ ಕೆಲಸ ಮಾಡಬೇಕು ಎಂದಿದ್ದರು. ಅಲ್ಲದೇ ವಿಡಿಯೋ ಮಾಡಿದ ಯುವಕನನ್ನು ಕರೆಸಿ ಬೈದಿದ್ದರಂತೆ ತುಕಾರಾಂ ಅವರು.

ಅದಕ್ಕಾಗಿ ತುಕಾರಾಂ ವಿರುದ್ಧ ಘೋಷಣೆಕೂಗಿ ಸಂಸದ ಸ್ಥಾನಕ್ಕೆ ರಾಜೀನಾಮೆ ನೀಡುವಂತೆ ಮತ್ತು ಅವಾಚ್ಯ ಶಬ್ದ ಬಳಸಿದ ಅವರ ಮೇಲೆ ಕಾನೂನು ಕ್ರಮ ತೆಗೆದುಕೊಳ್ಳುವಂತೆ ಆಗ್ರಹೊಸಲಾಯ್ತು.

ರಾಜ್ಯ ಬಿಜೆಪಿ ಕಾರ್ಯದರ್ಶಿ ಕೆ.ಎಸ್.ದಿವಾಕರ್,ಜಿಲ್ಲಾ ಅಧ್ಯಕ್ಷ ಅನಿಲ್ ನಾಯ್ಡು, ರೈತ ಮೋರ್ಚಾ ರಾಜ್ಯ ಉಪಾಧ್ಯಕ್ಷ ಎಸ್. ಗುರುಲಿಂಗನಗೌಡ, ಡಾ.ಅರುಣಾ ಕಾಮಿನೇನಿ ಮೊದಲಾದವರು ಪಾಲ್ಗೊಂಡಿದ್ದರು.

# PM ವಿಕಸಿತ ಭಾರತ ರೋಜ್ಗಾರ್ ಯೋಜನೆ: ಉದ್ಯೋಗಿಗಳಿಗೆ ಭಾರಿ ಅವಕಾಶ!

**ಬೆಳಗಾವಿ ವಾರ್ತೆ ಬಳ್ಳಾರಿ:** ಕೇಂದ್ರ ಸರ್ಕಾರ ಜಾರಿಗೆ ತಂದಿರುವ ಪ್ರಧಾನ ಮಂತ್ರಿ ವಿಕಸಿತ ಭಾರತ ರೋಜ್ಗಾರ್ ಯೋಜನೆ (PM-VBRY) ಕುರಿತು ಸಾರ್ವಜನಿಕರು ಹಾಗೂ ಉದ್ಯೋಗದಾತರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ಬಳ್ಳಾರಿಯ ಪ್ರಾದೇಶಿಕ ಭವಿಷ್ಯ ನಿಧಿ (ಇಕಈಔ) ವಲಯ ಕಚೇರಿಯಲ್ಲಿ ಬುಧವಾರ ಸುದ್ದಿಗೋಷ್ಠಿ ನಡೆಯಿತು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಪ್ರಾದೇಶಿಕ ಭವಿಷ್ಯ ನಿಧಿ ನಿಗಮದ ಆಯುಕ್ತ ಪ್ರವೀಣ್, ದೇಶದಲ್ಲಿ ಉದ್ಯೋಗ ಸೃಷ್ಟಿ ಹಾಗೂ ಹೊಸ ಉದ್ಯೋಗಾವಕಾಶಗಳನ್ನು ಉತ್ತೇಜಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಈ ಮಹತ್ವಾಕಾಂಕ್ಷಿ ಯೋಜನೆಯನ್ನು ಜಾರಿಗೆ ತಂದಿದೆ ಎಂದು ತಿಳಿಸಿದರು.

ಈ ಯೋಜನೆಯು ಕೇವಲ ಸರ್ಕಾರಿ ನೌಕರರಿಗೆ ಮಾತ್ರ ಸೀಮಿತವಾಗದೇ, ಖಾಸಗಿ ಸಂಸ್ಥೆಗಳು, ಸರ್ಕಾರೇತರ ಸಂಸ್ಥೆಗಳು ಹಾಗೂ ವಿವಿಧ ವಲಯಗಳ ಉದ್ಯೋಗಿಗಳಿಗೂ ಅನ್ವಯವಾಗಲಿದೆ ಎಂದು ಅವರು ಹೇಳಿದರು.

ಹೊಸ ಉದ್ಯೋಗಿಗಳನ್ನು ನೇಮಕ ಮಾಡಿಕೊಳ್ಳುವ ಸಂಸ್ಥೆಗಳು ಹಾಗೂ ಉದ್ಯೋಗ ಪಡೆಯುವ ವ್ಯಕ್ತಿಗಳಿಗೆ ಯೋಜನೆಯಡಿ ವಿವಿಧ ರೀತಿಯ ಪ್ರೋತ್ಸಾಹಕ ಸೌಲಭ್ಯಗಳು ದೊರೆಯಲಿದ್ದು, ಉದ್ಯೋಗದಾತರು ಮತ್ತು ಉದ್ಯೋಗಿಗಳು ಇದರ ಪ್ರಯೋಜನ ಪಡೆಯಬೇಕು ಎಂದು ಕರೆ ನೀಡಿದರು.

ದೇಶಾದ್ಯಂತ ಉದ್ಯೋಗ ವೃದ್ಧಿಗೆ ಉತ್ತೇಜನ ನೀಡುವ ಉದ್ದೇಶದಿಂದ ಕೇಂದ್ರ ಸರ್ಕಾರ ಈ ಯೋಜನೆಗೆ



ಭಾರಿ ಪ್ರಮಾಣದ ಅನುದಾನವನ್ನು ಮೀಸಲಿಟ್ಟಿದ್ದು, ಅರ್ಹ ಫಲಾನುಭವಿಗಳು ಯೋಜನೆಯ ಸದುಪಯೋಗ ಪಡೆದುಕೊಳ್ಳುವಂತೆ ಮನವಿ ಮಾಡಿದರು.

ಯೋಜನೆಯ ನೋಂದಣಿ ಪ್ರಕ್ರಿಯೆ, ಅರ್ಹತಾ ಮಾನದಂಡಗಳು, ಆರ್ಥಿಕ ನೆರವು ಹಾಗೂ ಅನುಷ್ಠಾನದ ಕುರಿತು ಸವಿಸ್ತಾರ ಮಾಹಿತಿ ನೀಡಿದ ಅವರು, ಹೊಸ ಉದ್ಯೋಗಿಗಳನ್ನು ನೇಮಕ ಮಾಡುವ ಸಂದರ್ಭದಲ್ಲಿ ಯೋಜನೆಯ ಸೌಲಭ್ಯಗಳನ್ನು ಬಳಸಿಕೊಳ್ಳುವಂತೆ ಉದ್ಯೋಗದಾತರಿಗೆ ಸಲಹೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಜಡೇಶ್ ವಿಭಾಗದ ಮೇಲ್ವಿಚಾರಕ ಹಾಗೂ ಅಬ್ದುಲ್ ಹಫೀಜ್ ಜಾರಿ ಅಧಿಕಾರಿ ಉಪಸ್ಥಿತರಿದ್ದರು.

# ಜಿಲ್ಲೆಯ ಆದರ್ಶ ವಿದ್ಯಾಲಯಗಳಲ್ಲಿನ ಖಾಲಿ ಸೀಟುಗಳ ಪ್ರವೇಶ ಪರೀಕ್ಷೆಗೆ ಅರ್ಜಿ ಆಹ್ವಾನ

**ಬೆಳಗಾವಿ ವಾರ್ತೆ ಕೊಪ್ಪಳ:** ಕೊಪ್ಪಳ ಜಿಲ್ಲೆಯ ಆದರ್ಶ ವಿದ್ಯಾಲಯಗಳಲ್ಲಿ 2026–27ನೇ ಸಾಲಿನಲ್ಲಿ ಖಾಲಿ ಇರುವ 7, 8 ಮತ್ತು 9ನೇ ತರಗತಿಗಳ ಸೀಟುಗಳಿಗೆ ಪ್ರವೇಶ ಪರೀಕ್ಷೆಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಜೂನ್ 22 ಕೊನೆಯ ದಿನವಾಗಿದ್ದು, ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳಿಗೆ ಪ್ರವೇಶ ಪರೀಕ್ಷೆ ಜೂ. 28ರ ಭಾನುವಾರ ನಡೆಯಲಿದೆ. ಅರ್ಜಿಗಳನ್ನು ಕೊಪ್ಪಳ ಜಿಲ್ಲೆಯ ಕನಕಗಿರಿ, ಟಣಕನಕಲ್, ತಳವಗೇರಾ ಮತ್ತು ಇಟಗಿಯಲ್ಲಿರುವ ಆದರ್ಶ ವಿದ್ಯಾಲಯಗಳಲ್ಲಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಆಯಾ ಶಾಲೆಯ ಮುಖ್ಯೋಪಾಧ್ಯಾಯರನ್ನು ಕನಕಗಿರಿಯ ಸುರೇಶ್ ಮೊ.ಸಂ: 9632737675, 8867273046, ಟಣಕನಕಲ್ ಪ್ರಕಾಶ್ ತಗಡಿನಮನಿ ಮೊ.ಸಂ: 901130717, 9916703201, ತಳವಗೇರಾ ಸಂಗಪ್ಪ ಕಿರಸೂರು ಮೊ.ಸಂ: 9008976878, 8105747111, ಇಟಗಿ ಶ್ರೀರಾಮರಡ್ಡಿ ಮೊ.ಸಂ: 9945420957, 8494858187, ಇವರನ್ನು ಸಂಪರ್ಕಿಸುವುದು ಎಂದು ಟಿ.ಬಿ.ಪಿ ಮುನಿರಾಬಾದ್‌ನ ಕೊಪ್ಪಳ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯ ಪ್ರಾಂಶುಪಾಲರು ಹಾಗೂ ಪದನಿಮಿತ್ತ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶ್ರೀ ಶಾಮಾನಂದ ಆಶ್ರಮದ ಉತ್ತರಾಧಿಕಾರಿಯಾಗಿ ಸಿದ್ಧಾನಂದ ಭಾರತಿ ಮಹಾಸ್ವಾಮಿ ನೇಮಕ



**ಬೆಳಗಾವಿ ವಾರ್ತೆ ಗೋಕಾಕ:** ನಗರದ ಅಂಬಿಗೇರ ಗಲ್ಲಿಯ ಶ್ರೀ ಶಾಮಾನಂದ ಆಶ್ರಮದ ಶ್ರೀ ಅತ್ಯಾನಂದ ಮಹಾಸ್ವಾಮಿಗಳ ಅನುಮತಿಯ ಮೇರೆಗೆ ಉತ್ತರಾಧಿಕಾರಿಯಾಗಿ ಶ್ರೀ ಸಿದ್ಧಾನಂದ ಭಾರತಿ ಮಹಾಸ್ವಾಮಿಗಳನ್ನು ಮಂಗಳವಾರದಂದು ನೇಮಕ ಮಾಡಲಾಯಿತು.

ಶ್ರೀ ಶಾಮಾನಂದ ಆಶ್ರಮದಲ್ಲಿ ಮಂಗಳವಾರದಂದು ಕರೇದ ಸಭೆಯಲ್ಲಿ ಶ್ರೀ ಅತ್ಯಾನಂದ ಮಹಾಸ್ವಾಮಿಗಳ ಮಾರ್ಗದರ್ಶನದಂತೆ ಸಭೆಯ ದಿವ್ಯ ಸಾನಿಧ್ಯವನ್ನು ವಹಿಸಿದ್ದ ಕಾಡರಕೊಪ್ಪದ ಶ್ರೀ ದಯಾನಂದ ಸರಸ್ವತಿ ಮಹಾಸ್ವಾಮಿಗಳು, ಮಹಾಲಿಂಗಪೂರದ ಶ್ರೀ ಸಹಜಾನಂದ ಮಹಾಸ್ವಾಮಿಗಳು, ಹುಣಶ್ಯಾಳದ ಶ್ರೀ ನಿಜಗುಣದೇವರು, ತುಳಸಿಗಿರಯ ಶ್ರೀ ರಾಮಾನಂದ ಸ್ವಾಮಿಗಳು, ತಳಕಟ್ನಾಳದ ಶ್ರೀ ಆತ್ಮಾನಂದ ಸ್ವಾಮಿಗಳು, ಮೆಟಗುಡ್ಡದ ಶ್ರೀ ಚನ್ನಯ್ಯ ಸ್ವಾಮಿಗಳು ಸಮ್ಮುಖದಲ್ಲಿ ಉತ್ತರಾಧಿಕಾರಿಯಾಗಿ ಶ್ರೀ ಸಿದ್ಧಾನಂದ ಭಾರತಿ ಮಹಾಸ್ವಾಮಿಗಳನ್ನು ನೇಮಕ ಮಾಡಲಾಯಿತು.

ಸಭೆಯ ಅಧ್ಯಕ್ಷತೆಯನ್ನು ಹುಬ್ಬಳ್ಳಿಯ ಸಿದ್ಧಾರೂಢ ಮಠದ ಧರ್ಮದರ್ಶಿ ಶಾಮಾನಂದ ಪೂಜೇರಿ ವಹಿಸಿದ್ದರು.

ಈ ಸಂದರ್ಭದಲ್ಲಿ ಹುಬ್ಬಳ್ಳಿಯ ಸಿದ್ಧಾರೂಢ ಮಠದ ಉಪಾಧ್ಯಕ್ಷ ಭೀಮಪ್ಪ ಬಾಗೇವಾಡಿ, ಗುರುನಾಥ ಮಲ್ಲಾಪೂರ, ಜಯಸಿಂಗ ಖಾಖಂಡಕಿ, ಪರಪ್ಪಾ ಹುದ್ದಾರ, ಲಚ್ಚಪ್ಪಾ ಜುಂಜರಕೊಪ್ಪ, ಲಗಮಪ್ಪ ನಾಯಕ, ಮಲ್ಲಪ್ಪ ಹುಚ್ಚನಟ್ಟಿ, ಶ್ಯಾಮ ನರಗುಂದ, ಭಗವಂತ ಪತ್ತಾರ, ವಿಲಾಸ ಕಾವರೆ, ವಿಜಯಕುಮಾರ ದೇಸಾಯಿ, ಶ್ರೀಶೈಲ ಪೂಜೇರಿ ಸೇರಿದಂತೆ ಶ್ರೀ ಶಾಮಾನಂದ ಆಶ್ರಮದ ಮತ್ತು ಸಿದ್ಧಾರೂಢ ಮಠದ ಭಕ್ತರು ಉಪಸ್ಥಿತರಿದ್ದರು.

## ಜೂನ್ 21 ರಂದು ಆರ್.ಎನ್.ಶೆಟ್ಟಿ ಕ್ರೀಡಾಂಗಣದಲ್ಲಿ ಉಚಿತ ಯೋಗಾಭ್ಯಾಸ ಕಾರ್ಯಕ್ರಮ

**ಬೆಳಗಾವಿ ವಾರ್ತೆ ಧಾರವಾಡ:** ಧಾರವಾಡ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆಯುಷ್ ಇಲಾಖೆಯಿಂದ ಜೂನ್ 21, 2026 ರಂದು ಬೆಳಿಗ್ಗೆ 6:30 ಗಂಟೆಯಿಂದ 8 ಗಂಟೆಯವರೆಗೆ ನಗರದ ಡಾ. ಆರ್.ಎನ್.ಶೆಟ್ಟಿ ಕ್ರೀಡಾಂಗಣದಲ್ಲಿ ಬೃಹತ್ ಪ್ರಮಾಣದಲ್ಲಿ ಸಾರ್ವಜನಿಕರಿಗೆ ಉಚಿತ ಯೋಗಾಭ್ಯಾಸ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮದಲ್ಲಿ ಯೋಗಾಭ್ಯಾಸದ ಮೂಲಕ ಆರೋಗ್ಯ ಕಾಪಾಡಿಕೊಳ್ಳುವುದು, ಒತ್ತಡ ನಿರ್ವಹಣೆ ಇತ್ಯಾದಿ ಯೋಗಾಸನಗಳನ್ನು ಪ್ರಾತ್ಯಕ್ಷಿಕೆ ಮೂಲಕ ಹೇಳಿಕೊಡಲಾಗುವುದು. ಯೋಗಾಭ್ಯಾಸಕ್ಕೆ ಆಗಮಿಸುವಾಗ ಎಲ್ಲರೂ ಸರಳವಾದ ಉಡುಪು, ಯೋಗಾ ಮ್ಯಾಟ್ ಅಥವಾ ಜಮಖಾನ ತಮ್ಮ ಜೊತೆಯಲ್ಲಿ ತರಬೇಕು. ಕಾರ್ಯಕ್ರಮದ ಪ್ರಯೋಜನವನ್ನು ಧಾರವಾಡ ನಗರದ ಎಲ್ಲ ಸಾರ್ವಜನಿಕರು, ವಿವಿಧ ಸಂಘ ಸಂಸ್ಥೆಯವರು, ಸರ್ಕಾರಿ ಇಲಾಖೆಯವರು ಪಡೆದುಕೊಳ್ಳಬೇಕೆಂದು ಜಿಲ್ಲಾ ಆಯುಷ್ ಅಧಿಕಾರಿ ಡಾ. ಗಣೇಶ ಕಬಾಡೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮತದಾರರ ಪಟ್ಟಿಯನ್ನು ಪರೀಕ್ಷಿಸಲು ಹಾಗೂ ನವೀಕರಣ ನಡೆಸುವ ಅಭಿಯಾನವನ್ನು ಯಶಸ್ವಿಯಾಗಿ ನಡೆಸುವಂತೆ ಬಾಲಚಂದ್ರ ಜಾರಕಿಹೊಳಿಯವರು ಪ್ರತಿನಿಧಿಗಳಿಗೆ ಕರೆ



ಗೋಕಾಕ: ಅರಭಾವಿ ಬಿಜೆಪಿ ಮಂಡಲದಿಂದ ಹಮ್ಮಿಕೊಳ್ಳಲಾಗಿದ್ದ ಮತದಾರರ ಪಟ್ಟಿಯನ್ನು ಪರಿಷ್ಕರಿಸಲು ಕರೆಯಲಾಗಿದ್ದ ಎಸ್ಐಆರ್ ವಿಶೇಷ ಸಭೆಯನ್ನುದ್ದೇಶಿಸಿ ಬಾಲಚಂದ್ರ ಜಾರಕಿಹೊಳಿ ಅವರು ಮಾತನಾಡುತ್ತಿರುವದು.

**ಬೆಳಗಾವಿ ವಾರ್ತೆ ಗೋಕಾಕ:** ಮತದಾರರ ಪಟ್ಟಿಯಿಂದ ಮೃತಪಟ್ಟ, ನಕಲಿ ಮತ್ತು ತಪ್ಪಾಗಿ ನಮೂದಿಸಲಾದ ಹೆಸರುಗಳನ್ನು ತೆಗೆದು ಹಾಕಲು ಪ್ರತಿಯೊಬ್ಬ ಅರ್ಹ ನಾಗರಿಕರ ನ್ನು ಮತದಾರ ಪಟ್ಟಿಯಲ್ಲಿ ಸೇರ್ಪಡೆ ಮಾಡುವಲ್ಲಿ ಬಿಎಲ್ಎ-2 ಪಾತ್ರ ಮಹತ್ವ ದ್ದಾಗಿದ್ದು, ಮತದಾರರ ಪಟ್ಟಿಯನ್ನು ಪರೀಕ್ಷಿಸಲು ಹಾಗೂ ನವೀಕರಣ ನಡೆಸುವ ಅಭಿಯಾನವನ್ನು ಯಶಸ್ವಿಯಾ ಗಿ ನಡೆಸುವಂತೆ ಅರಭಾವಿ ಶಾಸಕ, ಬೆಮುಲ್ ಅಧ್ಯಕ್ಷ ಬಾಲಚಂದ್ರ ಜಾರಕಿಹೊಳಿಯವರು ಪ್ರತಿನಿಧಿಗಳಿಗೆ ಕರೆ ನೀಡಿದರು.

ಮಂಗಳವಾರ, ಇಲ್ಲಿನ ಎನ್ಎಸ್ಎಫ್ ಕಚೇರಿಯಲ್ಲಿ ಅರಭಾವಿ ಬಿಜೆಪಿ ಮಂಡಲ ದಿಂದ ಹಮ್ಮಿಕೊಳ್ಳಲಾಗಿದ್ದ ಮತದಾರರ ಪಟ್ಟಿಯನ್ನು ಪರಿಷ್ಕರಿಸಲು ಕರೆಯಲಾಗಿದ್ದ ಎಸ್ಐಆರ್ ವಿಶೇಷ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ಯಾವ ಮುಲಾಜು ಇಲ್ಲದೇ ನಕಲಿ ಮತದಾರ ರನ್ನು ಗುರುತಿಸಿ ಪಟ್ಟಿಯಿಂದ ಡಿಲಿಟ್ ಮಾಡಲು ಅವರು ಕರೆ ನೀಡಿದರು. ಎಸ್ಐಆರ್ ಅಭಿಯಾನವನ್ನು ಗಂಭೀರ ವಾಗಿ ಪರಿಗಣಿಸಬೇಕು. ಯಾರೂ ಇದನ್ನು ಸಲೀಸಾಗಿ ತೆಗೆದುಕೊಳ್ಳಬಾರದು. ಗಂಭೀರವಾಗಿ ಕೆಲಸ ಮಾಡಿದರೆ ಮಾತ್ರ ನಾವು ಇದರಲ್ಲಿ ಯಶಸ್ವಿಯಾ ಗುತ್ತೇವೆ. ಮುಂದಿನ ಚುನಾವಣೆಯನ್ನು ನಾವು ಗೆಲ್ಲಲಿಕ್ಕೆ ಇದು ಅನುಕೂಲವಾಗುತ್ತದೆ. ಎಸ್ಐಆರ್ ನ್ನು ನಮ್ಮ ಪಕ್ಷದ ವರಿಷ್ಠರು ಗಂಭೀರವಾಗಿ ತೆಗೆದುಕೊಂಡಿದ್ದರ ಪರಿಣಾಮವಾಗಿ ಪಶ್ಚಿಮ ಬಂಗಾಲದಲ್ಲಿ ನಮ್ಮ ಪಕ್ಷವು ದಿಗ್ವಿಜಯ ಸಾಧಿಸಿತು. ಪಶ್ಚಿಮ ಬಂಗಾಲ ಮಾದರಿಯಲ್ಲಿಯೇ ನಾವು ಕರ್ನಾಟಕದಲ್ಲಿ ಅಚ್ಚುಕಟ್ಟಾಗಿ ಕೆಲಸ ವನ್ನು ನಿರ್ವಹಿಸಿದರೆ ಖಂಡಿತವಾಗಿ ಯೂ 2028ರ ವಿಧಾನ ಸಭಾ ಚುನಾವಣೆಯಲ್ಲಿ ಸ್ಪಷ್ಟ ಬಹುಮತದಿಂದ ಜಯ ಗಳಿಸುತ್ತೇವೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.

ಮತದಾರರ ಪರಿಷ್ಕರಣೆಯು ಆರಂಭವಾಗಲಿದ್ದು, ಅಗಸ್ಟ್ ತಿಂಗಳ ತನಕ ನಡೆಯಲಿದೆ. ಚುನಾವಣಾಧಿಕಾರಿಗಳು ಕರೆಯುವ ಪ್ರತಿ ಸಭೆಯಲ್ಲಿ ಬಿಎಲ್ಎ-2 ಕಾರ್ಯಕರ್ತರು ಭಾಗಿಯಾಗಬೇಕು. ಒಂದಕ್ಕಿಂತ ಹೆಚ್ಚು ಮತಗಟ್ಟೆಗಳಲ್ಲಿ ಮತದಾನ ಮಾಡುವವರ ಹೆಸರುಗಳು ಕಂಡು ಬಂದಲ್ಲಿ ಅಂತಹವರನ್ನು ನಕಲಿ ಮತದಾರರೆಂದು ಗುರುತಿಸಿ ಕೇವಲ ಒಂದು ಮತಗಟ್ಟೆಗೆ ಅವರನ್ನು ಪರಿಗಣಿಸ 'ಬೇಕು. ಎಷ್ಟೆಷ್ಟು ನಕಲಿ ಮತದಾರರನ್ನು ನಾವು ಡಿಲಿಟ್ ಮಾಡಿಸುತ್ತೇವೆಯೋ ಅದು ನಮ್ಮ ಪಕ್ಷಕ್ಕೆ ಮತ್ತಷ್ಟು ಅನುಕೂ ಲವಾ ಗಲಿದೆ. ನಕಲಿ ಮತದಾರರನ್ನು ಗುರುತಿ ಸುವಲ್ಲಿ ಬಿಎಲ್ಎ-2 ಕಾರ್ಯಕರ್ತರು ಯಾವುದಕ್ಕೂ ಹಿಂಜರಿ ಯಬಾರದು ಎಂದು ಅವರು ತಿಳಿಸಿದರು. ಅರಭಾವಿ ಮತಕ್ಷೇತ್ರದಲ್ಲಿ ಸುಮಾರು 2.45 ಲಕ್ಷ ಮತದಾರರಿದ್ದು, ಅರ್ಹರನ್ನು ಗುರುತಿಸಿದರೆ ಅಂತಹ ಮತಗಳು ನಮ್ಮ ಪಾಲಾಗಲಿವೆ ಎಂದರು. ಮೃತಪಟ್ಟ, ನಕಲು ಮತ್ತು ಸ್ಥಳಾಂತರಗೊಂಡ ಮತದಾರರನ್ನು ತೆಗೆದುಹಾಕುವಂತೆ ಅವರು ಕಾರ್ಯ ಕರ್ತರಿಗೆ ಸೂಚಿಸಿದರು. ಅರಭಾವಿ ಮಂಡಲದ ಬಿಎಲ್ಎ-1 ಗೋವಿಂದ ಕೊಪ್ಪದ ಪ್ರಾಸ್ತಾವಿಕವಾಗಿ ಮಾತನಾಡಿ, ಎಸ್ಐಆರ್ ಮಹತ್ವವನ್ನು ವಿವರಿಸಿದರು. ಅರಭಾವಿ ಮಂಡಲ ಅಧ್ಯಕ್ಷ ಮಹಾದೇವ ಶೆಕ್ಕಿ, ಮಂಡಲ ಪ್ರಕಾರ್ಯ ದರ್ಶಿಗಳಾದ ಪರಸಪ್ಪ ಬಬಲಿ, ಪ್ರಮೋದ ನುಗ್ಗಾನಟ್ಟಿ ವೇದಿಕೆಯಲ್ಲಿ ಉಪಸ್ಥಿತರಿದ್ದರು. ಅರಭಾವಿ ಮಂಡಲದ ಎಲ್ಲ 281 ಮತಗಟ್ಟೆಗಳ ಪ್ರತಿನಿಧಿಗಳು ಈ ಸಭೆಯಲ್ಲಿ ಭಾಗಿಯಾಗಿದ್ದರು.

# 18 ಗುರುವಾರದಂದು ಸಾಧಕರಿಗೆ ಪ್ರಶಸ್ತಿ ಸಮಾರಂಭ



ಗೋಕಾಕ: ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡುತ್ತಿರುವುದು.

**ಬೆಳಗಾವಿ ವಾರ್ತೆ ಗೋಕಾಕ:** ದಿನಾಂಕ 18 ಗುರುವಾರ'ದಂದು ಸಾಧಕರಿಗೆ ಪ್ರಶಸ್ತಿ ಸಮಾರಂಭ ಹಮ್ಮಿಕೊಳ್ಳಲಾಗಿದೆ ಎಂದು ಶ್ರೀಮತಿ ಮಾಲತಶ್ರೀ ಮೈಸೂರು ಹೇಳಿದರು.

ನಗರದಲ್ಲಿ ಹಮ್ಮಿಕೊಂಡ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಅವರು ಮಾತನಾಡಿದರು.

ಆಶಾಕಿರಣ ಕಲಾ ಟ್ರಸ್ಟ್ ಗೋಕಾಕ, ಬೆಂಗಳೂರು, ಇವರ ಆಶ್ರಯದಲ್ಲಿ ಮರೆಯದ ಮಾಣಿಕ್ಯ ಪ್ರಶಸ್ತಿ-2026 ಸಾಧ'ಕರಿಗೆ ಪ್ರಶಸ್ತಿ ಪ್ರಧಾನ ಸಮಾರಂಭವನ್ನು ನಗರದ ರೋಟರಿ ರಕ್ತ ಭಂಡಾರದಲ್ಲಿ ಮುಂಜಾನೆ 10:30ಕ್ಕೆ ಹಮ್ಮಿಕೊಳ್ಳಲಾಗಿದ್ದು, ಕಾರ್ಯಕ್ರಮದ ಸಾನಿಧ್ಯವನ್ನು ನಗರದ ಶ್ರೀ ಶೂನ್ಯ ಸಂಪಾದನ ಮಠದ ಶ್ರೀ ಮುರುಘ ರಾಜೇಂದ್ರ ಮಹಾಸ್ವಾಮಿಗಳು ವಹಿಸುವರು. ಕಾರ್ಯಕ್ರಮವನ್ನು ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಉದ್ಘಾಟಿಸುವರು. ಚಲನಚಿತ್ರ ನಟ ಅನಿರುದ್ಧ ಜತಕರ ಪ್ರಶಸ್ತಿ ಪ್ರಧಾನ ಮಾಡಲಿದ್ದಾರೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸುವರು. ಮುಖ್ಯ ಅತಿಥಿಗಳಾಗಿ ತಹಶೀಲ್ದಾರ ಡಾ.ಮೋಹನ ಭಸ್ಮೆ, ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಪರಶುರಾಮ ಗಸ್ತೆ, ಮಹಾಂತೇಶ ತಾಂವಶಿ, ಶ್ರೀಮತಿ ರಜನಿ ಜೀರಗ್ಯಾಳ ಭಾಗವಹಿಸುವರು. ಕಾರಣ ನಗರದ ಎಲ್ಲಾ ಕಲಾಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಈಶ್ವರಚಂದ್ರ ಬೇಟಗೇರಿ, ಶ್ರೀಮತಿ ರಜನಿ ಜೀರಗ್ಯಾಳ, ಶ್ರೀಮತಿ ಜಯಾ ಚುನಮರಿ ಉಪಸ್ಥಿತರಿದ್ದರು.

# ಕೃಷಿ ವಿಜ್ಞಾನಿಗಳಿಂದ ರೈತರಿಗೆ ಸಲಹೆ



**ಬೆಳಗಾವಿ ವಾರ್ತೆ ಚನ್ನಮ್ಮನ ಕಿತ್ತೂರ:** ಸಲೀಂ ಸಂಗತ್ರಾಸ್ ಉಪ ಕೃಷಿ ನಿರ್ದೇಶಕರು ಬೆಳಗಾವಿ, ಸಿ ಆಯ್ ಹೂಗಾರ ಸಹಾಯಕ ಕೃಷಿ ನಿರ್ದೇ ಶಕರು ಬೆಳಗಾವಿ ಹಾಗೂ ಎಸ್ ಎಸ್ ಹಿರೇಮಠ ಕೆಎಲ್ಇ ಕೃಷಿ ವಿಜ್ಞಾನ ಕೇಂದ್ರ, ಮತ್ತಿಕೊಪ್ಪ ಸಹಯೋಗದಲ್ಲಿ ಪೀಡೆ ಸರ್ವೇಕ್ಷಣಾ ತಂಡವು ಕಿತ್ತೂರು ತಾಲೂಕಿನ ವಿವಿಧ ಗ್ರಾಮಗಳಿಗೆ ಭೇಟಿ ನೀಡಿತು. ಸೋ ಯಾ-ಅವರೆ ಹಾಗೂ ಕಬ್ಬು ಬೆಳೆಗಳಲ್ಲಿ ಕಂಡು ಬಂದ ಕೀಟ ಮತ್ತು ರೋಗಗಳ ಕುರಿತು ರೈತರಿಗೆ ಸಲಹೆ ನೀಡಿದರು.

**ಸೋಯಾ-ಅವರೆ :** ಕಾಂಡ ಕೊರೆಯುವ ನೊಣದ ಬಾಧೆ ಕಂಡು ಬಂದಿದ್ದು, ಪ್ರತಿ ಲೀಟರ್ ನೀರಿಗೆ 0.3 ಗ್ರಾಂ ಥಯಾಮಿಥಾಕ್ಸಾಮ್ 25 ಡಬ್ಲೂಜಿ ಅಥವಾ ಸಂಯುಕ್ತ ಕೀಟನಾಶಕಗಳಾದ ಥಯಾಮಿಥಾಕ್ಸಾಮ್ 12.6% + ಲ್ಯಾಮ್ಡಾ ಸೈಹೆಲೋಥೀನ್ 9.5% 20 ಎಫ್. ಎಸ್. ಪ್ರತಿ ಲೀಟರ ನೀರಿಗೆ 0.25 ಮಿಲೀ ಬೆರೆಸಿ ಸಿಂಪಡಿಸಿ. ಸ್ಪೂಡಾಪ್ಟರಾ/ಹೆಲಿಕೋವರ್ಪಾ ಕಾಯಿ ತಿನ್ನುವ ಕೀಟಗಳು ಸಂಜೆಯ ಸಮಯದಲ್ಲಿ ಹೆಚ್ಚಾಗಿ ಹೊರಗೆ ಬಂದು ಬೆಳೆ ಹಾನಿ ಮಾಡುತ್ತವೆ ಆದ ಕಾರಣ ರೈತರು ನಿಗಾವಹಿಸಿ ಕೀಟಭಾದೆ ಕಂಡು ಬಂದ ತಕ್ಷಣ ನಿರ್ವಹಣೆಗೆ 0.2 ಮಿಲೀ. ಕ್ಲೋಯಾರ್ಂಟ್ರನಿಲಿಪ್ರೊಲ್ 18.5 ಎಸ್. ಸಿ. ಅಥವಾ 0.5 ಮಿಲೀ. ಲ್ಯಾಮಾ ಸೈಹೆಲೋಥೀನ್ ಅಥವಾ 2 ಗ್ರಾಂ ಮೆಟರೈಜಿಯಂ ರಿಲೈ ಶಿಲೀಂದ್ರವನ್ನು ಪ್ರತಿ ಲೀಟರ ನೀರಿಗೆ ಬೆರೆಸಿ ಸಿಂಪಡಿಸಬೇಕು. ಪ್ರತಿ ಎಕರೆಗೆ 6 ಲಿಂಗಾಕ?ಕ ಮೋಹಕ ಬಲೆಗಳನ್ನು ಬೆಳೆಯ ಒಂದು ಅಡಿಗಿಂತ ಎತ್ತರದಲ್ಲಿನೇತುಹಾಕಬೇಕು.

ಕೀಟ ನಿರ್ವಹಣೆ ಜೊತೆಗೆ ಪ್ರತಿ ಲೀಟರ ನೀರಿಗೆ 5 ಗ್ರಾಂ ನೀರಿನಲ್ಲಿ ಕರಗುವ ಎನ್‌ಪಿಕೆ ರಸಗೊಬ್ಬರಗಳಾದ 19:19:19 ಅಥವಾ 13:0:45 ಗಳನ್ನು ಬಳಸಬೇಕು.

ಕಬ್ಬು: ಖಓಐ 13374 ಮತ್ತು ಖಓಐ 13346 ಕಬ್ಬು ತಳಿಯಲ್ಲಿ ವಿಕೃತ ಕೊಳೆ ರೋಗ (ಪಕ್ಕಾ ಬೋಯಿಂಗ್) ಕಂಡು ಬಂದಿದ್ದು, ರೈತ ಬಾಂಧವರು ಸಂಯುಕ್ತ ಶಿಲೀಂದ್ರನಾಶಕ ಅಜೋಕ್ಸಿಸ್ಟೋಬಿನ್ 18.2% + ಡೈಫೆನ್ ಕೊನೊಜೋಲ್ 11.4 ಎಸ್. ಸಿ. ಪ್ರತಿ ಲೀಟರ ನೀರಿಗೆ ಒಂದು ಮಿಲೀ ಜೊತೆಗೆ 5 ಗ್ರಾಂ ಡಿಎಪಿ ಬೆರೆಸಿ ಸಿಂಪಡಿಸಬೇಕು. ಒಂದು ಎಕರೆ ಪ್ರದೇಶಕ್ಕೆ ಕನಿಷ್ಟ 150 ರಿಂದ 200 ಲೀಟರ ಸಿಂಪರಣಾ ದ್ರಾವಣ ಬಳಸಬೇಕು. ಸಿಂಪರಣೆ ಮಾಡುವವರು ತಪ್ಪದೇ ರಕ್ಷಾ ಕವಚ ಧರಿಸಬೇಕು.

ಬಿಳಿ ಉಣ್ಣೆ ಸಮಗ್ರ ನಿರ್ವಹಣೆಗೆ ಸಾರಜನಕಯುಕ್ತ ರಸಗೊಬ್ಬರವನ್ನು ಸಮತೋಲನ ಪ್ರಮಾಣದಲ್ಲಿ ಬಳಸುವುದು. ಗದ್ದೆಯಲ್ಲಿ ನೀರು ನಿಲ್ಲದೆ ಬಸಿದು ಹೋಗುವಂತೆ ವ್ಯವಸ್ಥೆ ಮಾಡುವುದು. ಪ್ರತಿ ಲೀಟರ ನೀರಿಗೆ 1 ಗ್ರಾಂ ಅಸಿಫೆಟ್ 75 ಡಬ್ಲೂಪಿ ಅಥವಾ 2ಮಿಲೀ. ಕ್ಲೋರ್‌ಪೈರಿ ಫಾಸ್ 20ಇ. ಸಿ. ಕೀಟನಾಶಕವನ್ನು ಬೆರೆಸಿ ಸಿಂಪಡಿಸಬೇಕು. ಪ್ರತಿ ಎಕರೆಗೆ ಸುಮಾರು 400 ಲೀಟರ ಸಿಂಪರಣಾ ದ್ರಾವಣ ಬೇಕಾಗುತ್ತದೆ.

ತುಕ್ಕು ರೋಗದ ನಿರ್ವಹಣೆಗೆ ಪ್ರಾಪಿಕೊನಾಜೋಲ್ 1ಟಟ ಹಾಗೂ 5 ಗ್ರಾಂ 13.0.45 ಪ್ರತಿ ಲೀಟರ್ ನೀರಿಗೆ ಬೆರೆಸಿ ಸಿಂಪರಣೆ ಕೈಗೊಳ್ಳಲು ತಿಳಿಸಿದರು. ಈ ಸಂದರ್ಭದಲ್ಲಿ ಕೃಷಿ ಅಧಿಕಾರಿಗಳಾದ ಮಂಜುನಾಥ ಕೆಂಚರಾಹುತ ಹಾಗೂ ಎಸ್ ಈ ನಿಂಬಲಗುಂಡಿ, ಶಶಿಧರ್ ಪಟ್ಟಣಶೆಟ್ಟಿ, ಬಸವರಾಜ ಭದ್ರಶೆಟ್ಟಿ, ವಿಶಾಲ ಅರಳಿಮರದ, ಶಶಿಧರ್ ಕೊಡ್ಲಿ ಹಾಗೂ ರೈತರು ಹಾಜರಿದ್ದರು.

# ಬೆಳಗಾವಿಯಲ್ಲಿ ಕಸದ ರಾಶಿಯಲ್ಲಿ 59 ಜೀವಂತ ಗುಂಡುಗಳು ಪತ್ತೆ!



**ಬೆಳಗಾವಿ ವಾರ್ತೆ ಬೆಳಗಾವಿ:** ನಗರದ ಉದ್ಯಮಬಾಗ ಕೈಗಾರಿಕಾ ಪ್ರದೇಶದ ಜೈನ ಹೆರಿಟೇಜ್ ಶಾಲೆ ಬಳಿ ಕಸದ ರಾಶಿಯೊಂದರಲ್ಲಿ 59 ಜೀವಂತ ಗುಂಡುಗಳು ಪತ್ತೆಯಾಗಿರುವ ಘಟನೆ ಆತಂಕಕ್ಕೆ ಕಾರಣವಾಗಿದೆ. ಪೌರ ಕಾರ್ಮಿಕರು ಕಸ ವಿಂಗಡಣೆ ಕಾರ್ಯದಲ್ಲಿ ತೊಡಗಿದ್ದ ವೇಳೆ ಈ ಗುಂಡುಗಳು ಪತ್ತೆಯಾಗಿದ್ದು, ತಕ್ಷಣವೇ ಪೊಲೀಸರಿಗೆ ಮಾಹಿತಿ ನೀಡಲಾಗಿದೆ. ಮಾಹಿತಿ ಪಡೆದ ಉದ್ಯಮಬಾಗ ಪೊಲೀಸ್ ಠಾಣೆಯ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಕಸದ ರಾಶಿಯಲ್ಲಿ ಪತ್ತೆಯಾದ ಎಲ್ಲಾ ಜೀವಂತ ಗುಂಡುಗಳನ್ನು ವಶಕ್ಕೆ ಪಡೆದು ಹೆಚ್ಚಿನ ತನಿಖೆ ಆರಂಭಿಸಿದ್ದಾರೆ. ಪ್ರಾಥಮಿಕ ಮಾಹಿತಿಯ ಪ್ರಕಾರ, ಕೈಗಾರಿಕಾ ಪ್ರದೇಶದಲ್ಲಿ ಸಂಗ್ರಹವಾಗಿದ್ದ ಕಸವನ್ನು ಪೌರ ಕಾರ್ಮಿಕರು ವಿಂಗಡಿಸುತ್ತಿದ್ದಾಗ ಅನುಮಾನಾಸ್ಪದ ವಸ್ತುಗಳು ಕಂಡುಬಂದಿವೆ. ಪರಿಶೀಲಿಸಿದಾಗ ಅವು ಜೀವಂತ ಮದ್ದುಗುಂಡುಗಳಾಗಿರುವುದು ಬೆಳಕಿಗೆ ಬಂದಿದೆ. ಘಟನೆಯ ಬಗ್ಗೆ ತಕ್ಷಣ ಹಿರಿಯ ಅಧಿಕಾರಿಗಳಿಗೆ ಮಾಹಿತಿ ನೀಡಲಾಗಿದ್ದು, ಭದ್ರತಾ ಕ್ರಮಗಳನ್ನು ಕೈಗೊಳ್ಳಲಾಗಿದೆ.

ಈ ಗುಂಡುಗಳು ಯಾವ ರೀತಿಯ ಶಸ್ತ್ರಾಸ್ತ್ರಗಳಿಗೆ ಬಳಸಲಾಗುತ್ತವೆ, ಅವುಗಳನ್ನು ಯಾರು ಹಾಗೂ ಯಾವ ಉದ್ದೇಶಕ್ಕಾಗಿ ಕಸದ ರಾಶಿಗೆ ಎಸೆದಿದ್ದಾರೆ ಎಂಬುದು ತನಿಖೆಯಿಂದಲೇ ತಿಳಿದುಬರಬೇಕಿದೆ. ಕೈಗಾರಿಕಾ ಪ್ರದೇಶವಾಗಿರುವುದರಿಂದ ಸಿಸಿಟಿವಿ ದೃಶ್ಯಾವಳಿಗಳನ್ನು ಪರಿಶೀಲಿಸುವ ಸಾಧ್ಯತೆಯೂ ಇದೆ.

ಘಟನೆ ಭದ್ರತಾ ವಲಯದಲ್ಲಿ ಚರ್ಚೆಗೆ ಗ್ರಾಸವಾಗಿದ್ದು, ಜೀವಂತ ಗುಂಡುಗಳು ಸಾರ್ವಜನಿಕ ಸ್ಥಳದ ಕಸದ ರಾಶಿಯಲ್ಲಿ ಪತ್ತೆಯಾಗಿರುವುದು ಹಲವು ಅನುಮಾನಗಳಿಗೆ ಕಾರಣವಾಗಿದೆ. ಪೊಲೀಸರು ವಿವಿಧ ಆಯಾಮಗಳಲ್ಲಿ ತನಿಖೆ ನಡೆಸುತ್ತಿದ್ದು, ಗುಂಡುಗಳ ಮೂಲ ಪತ್ತೆಹಚ್ಚಲು ಪ್ರಯತ್ನಿಸುತ್ತಿದ್ದಾರೆ. ಉದ್ಯಮಬಾಗ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ವಶಪಡಿಸಿಕೊಂಡ ಗುಂಡುಗಳನ್ನು ತಜ್ಞರ ಪರೀಕ್ಷೆಗೆ ಕಳುಹಿಸುವ ಸಾಧ್ಯತೆಯಿದೆ. ತನಿಖೆಯ ನಂತರ ಹೆಚ್ಚಿನ ಮಾಹಿತಿ ಬಹಿರಂಗವಾಗುವ ನಿರೀಕ್ಷೆಯಿದೆ.

# ಕಾನೂನು ಅರಿವು ಕಾರ್ಯಕ್ರಮ



**ಬೆಳಗಾವಿ ವಾರ್ತೆ ಧಾರವಾಡ:** ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಬೆಂಗ ಳೂರು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಶಾಲಾ ಶಿಕ್ಷಣ ಇಲಾಖೆ, ಶ್ರೀಮತಿ ವಿದ್ಯಾ. ಪಿ. ಹಂಚಿನಮನಿ ಪದವಿ ಪೂರ್ವ ವಿಜ್ಞಾನ ಕಾಲೇಜು, ಧಾರವಾಡ ಇವರ ಸಂಯುಕ್ತಾಶ್ರಯದಲ್ಲಿ ಪೋಕ್ಸೊ ಕಾಯಿದೆ ಹಾಗೂ ಮಾದಕ ವಸ್ತುಗಳ ಸೇವನೆಯಿಂದ ಉಂಟಾಗುವ ದುಷ್ಪರಿಣಾಮಗಳ ಕುರಿತು ಕಾನೂನು ಅರಿವು ಕಾರ್ಯಕ್ರಮವನ್ನು ಜೂನ್ 15 ರಂದು ಶ್ರೀಮತಿ ವಿದ್ಯಾ. ಪಿ. ಹಂಚಿನಮನಿ ಪದವಿ ಪೂರ್ವ ವಿಜ್ಞಾನ ಕಾಲೇಜಿನ ಕೊಠಡಿಯಲ್ಲಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿ ಕಾರದ, ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಹಾಗೂ ಅಧ್ಯಕ್ಷ ಎನ್.ವಿ.ವಿಜಯ, ಅವರು ಸಸಿಗೆ ನೀರು ಹಾಕುವುದರ ಮೂಲಕ ಕಾರ್ಯಕ್ರಮದ ಉದ್ಘಾಟನೆಯನ್ನು ನಡೆಸಿ, ಮಾದಕ ದ್ರವ್ಯ ವ್ಯಸನದಿಂದ ಇಂದಿನ ಯುವಕರ ಮೇಲೆ ಉಂಟಾಗುವ ದುಷ್ಪರಿಣಾಮದ ಕುರಿತು ಅವರು ಮಾತನಾಡಿದರು.

ಮುಖ್ಯ ಅತಿಥಿಗಳಾಗಿ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಬೆಂಗಳೂರು ಜಿಲ್ಲಾ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿ ಎಚ್. ಶಶಿಧರ ಶೆಟ್ಟಿ, ಅವರು ಭಾಗವಹಿಸಿ ಪೋಕ್ಸೋ ಕಾಯಿದೆಯ ಕುರಿತು ಮಾತನಾಡಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿ ಅಲ್ಲಪ್ಪ ಎಂ ಬಡಿಗೇರ, ಶಾಲಾ ಶಿಕ್ಷಣ ಇಲಾಖೆಯ, ಉಮೇಶ ಬೊಮ್ಮಕ್ಕನವರ, ಮುಖ್ಯ ಅತಿಥಿಗಳಾಗಿ ಹಾಜರಿದ್ದರು.

ವಿ.ಪಿ.ಎಚ್ ಪಿಯು ಕಾಲೇಜು ಪ್ರಾಂಶುಪಾಲರಾದ ರಾಜು. ಎಸ್. ಕಡೆಮನಿ ಅವರು ಅಧ್ಯಕ್ಷತೆ ವಹಿಸಿದ್ದರು.

ಕಾರ್ಯಕ್ರಮದಲ್ಲಿ ಬೆಂಗಳೂರಿನ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ, ಸಾರ್ವಜನಿಕ ಸಂಪರ್ಕ ಅಧಿಕಾರಿ ಬಾಲಸುಬ್ರಹ್ಮಣ್ಯ ಸೇರಿದಂತೆ ಕಾಲೇಜಿನ ಪ್ರಾಧ್ಯಾಪಕ ವೃಂದದವರು ಹಾಗೂ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಮೇದಾರ ಅಲೇಮಾರಿ ಸಮುದಾಯ ಜಿಲ್ಲಾ ಮಟ್ಟದ ಅನುಷ್ಠಾನ ಸಮಿತಿಗೆ ನಾಮನಿರ್ದೇಶನ

ಬಾಗಲಕೋಟೆ: ಜಿಲ್ಲಾ ಅಲೆಮಾರಿ ಅಭಿವೃದ್ಧಿ ನಿಗಮದ ವತಿಯಿಂದ ಮೇದಾರ ಅಲೆಮಾರಿ ಸಮುದಾಯದ ಅಭಿವೃದ್ಧಿಗಾಗಿ ಜಿಲ್ಲಾ ಮಟ್ಟದ ಅನುಷ್ಠಾನ ಸಮಿತಿಗೆ ಮೂವರು ನಾಮ ನಿರ್ದೇಶಿತ ಸದಸ್ಯರನ್ನು ನೇಮಕ ಮಾಡಲು ಆಸಕ್ತರಿಂದ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತಿ ಹೊಂದಿರುವ ಮೇದಾರ ಸಮುದಾಯದ ಅಭ್ಯರ್ಥಿಗಳು ನಿಗದಿತ ನಮೂನೆಯಲ್ಲಿ ಅರ್ಜಿಯನ್ನು ಭರ್ತಿ ಮಾಡಿ ಅವಶ್ಯಕ ದಾಖಲೆಗಳೊಂದಿಗೆ ಜೂನ್ 20 ರೊಳಗಾಗಿ ಉಪನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಜಿಲ್ಲಾಡಳಿತ ಭವನ, ರೂ.ನಂ.102, ನವನಗರ ಬಾಗಲಕೋಟೆ ದೂಸಂ.08354-235525 ಹಾಗೂ ಮೊನಂ.94480843021 ಇವರಿಸ ಸಲ್ಲಿಸುವಂತೆ ಪ್ರಕಟಣೆ ತಿಳಿಸಿದೆ.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI, KARNATAKA - 590001